ವಿಜಯಪುರ | ಸಂಪುಟ 04 | ಸಂಚಿಕೆ 182 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಶುಕ್ರವಾರ, ಸೆಪ್ಟೆಂಬರ್, 11, 2026



"ಸ್ವಪ್ರಚಾರಕ್ಕೆ, ಇಮೇಜ್ ಮೇಕ್ ಓವರ್ ಗೆ ಎಷ್ಟು ಕೋಟಿ ಕೋಟಿ ಸುರಿದರೂ, ದಿನಬೆಳಗಾದರೆ ಪತ್ರಿಕೆಗಳಲ್ಲಿ ಫುಲ್ ಪೇಜ್ ಜಾಹೀರಾತು ಕೊಟ್ಟರೂ, ಸಾಮಾಜಿಕ ಜಾಲತಾಣಗಳಲ್ಲಿ ಬಿಲ್ಡಪ್ ಕೊಟ್ಟರೂ ಜನಸಾಮಾನ್ಯರಿಗೆ "ನಾನು ಯಾರು" ಎಂಬುದೇ ಗೊತ್ತಿಲ್ಲ ಎನ್ನುವ ಸತ್ಯ ಅರಿವಾಗಿ ಮುಖ್ಯಮಂತ್ರಿಗಳು ಪಾಪ ಹತಾಶರಾಗಿದ್ದಾರೆ."

■ ಆರ್.ಅಶೋಕ
ವಿಧಾನಸಭೆ ವಿಪಕ್ಷ ನಾಯಕರು

# ಡಿಕೆಶಿ ಸರ್ಕಾರದಿಂದ ಬಂಪರ್ ಗಿಫ್ಟ್ ಘೋಷಣೆ

## 100 ದಿನಗಳ ಆಡಳಿತ ಪೂರೈಸಿದ ಕಾಂಗ್ರೆಸ್ ಸರ್ಕಾರ | ಬಡವರಿಗೆ 5 ಲಕ್ಷ ಸೈಟ್, ರೈತ ಚೈತನ್ಯ ಸೇರಿ ಹಲವು ಹೊಸ ಯೋಜನೆಗಳು ಮತ್ತು ಉಪಕ್ರಮಗಳಿಗೆ ಚಾಲನೆ



ಬೆಂಗಳೂರು: ಡಿ.ಕೆ. ಶಿವಕುಮಾರ್ ಅವರು ಕರ್ನಾಟಕ ರಾಜ್ಯದ ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಂಡು 100 ದಿನಗಳನ್ನು ಪೂರೈಸಿದ ಹಿನ್ನೆಲೆಯಲ್ಲಿ,ಸರ್ಕಾರ ಗುರುವಾರ ಹಲವು ಹೊಸ ಯೋಜನೆಗಳು ಮತ್ತು ಉಪಕ್ರಮಗಳಿಗೆ ಚಾಲನೆ ನೀಡಿತು.

ಇದರಲ್ಲಿ 'ಸೇವಾ ಒನ್' ಡಿಜಿಟಲ್ ನಾಗರಿಕ ಸೇವಾ ವೇದಿಕೆ, ಮುಖ್ಯಮಂತ್ರಿ ರೈತ ಚೈತನ್ಯ ಯೋಜನೆ, ಃಒಖಿಅ 2.0 ಮೊಬೈಲ್ ಅಪ್ಲಿಕೇಶನ್ ಹಾಗೂ 5 ಲಕ್ಷ ವಸತಿ ನಿವೇಶನಗಳನ್ನು ವಿತರಿಸುವ ಯೋಜನೆ ಸೇರಿವೆ.

ಇದರ ಜತೆಗೆ 'ಒನ್ ಕರ್ನಾಟಕ ಮೊಬಿಲಿಟಿ ಆ್ಯಪ್ – KSRTC ಅವತಾರ 2.0' ನ್ನು ಸರ್ಕಾರ ಆರಂಭಿಸಿತು. ಡೀಸೆಲ್ ವಾಹನಗಳಿಗಾಗಿ ರಿಟ್ರೋಫಿಟ್ ಎಮಿಷನ್ ಕಂಟ್ರೋಲ್ ಡಿವೈಸ್ (RECD) ಉಪಕ್ರಮವನ್ನು ಪರಿಚಯಿಸುವುದರ ಜೊತೆಗೆ 'ಸೈನಿಕ ಸಮ್ಮಾನ್' ಯೋಜನೆಯನ್ನೂ ಘೋಷಿಸಲಾಯಿತು.

ವಿದ್ಯಾರ್ಥಿಗಳಲ್ಲಿ ನಾಯಕತ್ವ, ಹೊಣೆಗಾರಿಕೆ ಹಾಗೂ ಪ್ರಜಾಪ್ರಭುತ್ವ ಮೌಲ್ಯಗಳನ್ನು ಬೆಳೆಸಲು ಸರ್ಕಾರ ಮುಂದಾಗಿದೆ. ಹೀಗಾಗಿ ಕಾಲೇಜು ಹಾಗೂ ವಿಶ್ವವಿದ್ಯಾಲಯಗಳಲ್ಲಿ ಮತ್ತೆ ವಿದ್ಯಾರ್ಥಿ ಸಂಘಗಳಚುನಾವಣೆ ನಡೆಸಲು ಸಚಿವ ಸಂಪುಟ ಅಸ್ತು ಎಂದಿದೆ ಎಂದರು.

ಕಾರ್ಮಿಕರಿಗೆ 10 ಸಾವಿರ ಮನೆ ಕಟ್ಟಿಕೊಡಲು ಪ್ಲ್ಯಾನ್: ಸರ್ಕಾರ ಕಾರ್ಮಿಕರಿಗೂ ಬಂಪರ್ ನೀಡಿದೆ. ಕೈಗಾರಿಕೆಗಳು ತಮ್ಮ ನೌಕರರು ಸಮೀಪದಲ್ಲೆ ವಾಸಿಸಲು ಮನೆಗಳನ್ನು ಕಟ್ಟಿಕೊಡಲು ಶ್ರಮಿಕ ನಿವಾಸ ಯೋಜನೆ ಜಾರಿಗೆ ತೀರ್ಮಾನಿಸಲಾಗಿದೆ. ಉದ್ದಿಮೆಗಳು ತಮ್ಮ ನೌಕರರಿಗೆ ಮನೆ ಕಟ್ಟಿಕೊಡಲು ಕೈಗಾರಿಕೆಗಳಿಗೆ ಬಂಡವಾಳ ಸಹಾಯಧನ ನೀಡಲು ನಿರ್ಧರಿಸಲಾಗಿದೆ ಎಂದರು.

**10 ಜಿಲ್ಲೆಗಳಲ್ಲಿ ಉದ್ಯೋಗ ನಿಧಿ ಯೋಜನೆ:** 10 ಜಿಲ್ಲೆಗಳಲ್ಲಿ ಉದ್ಯೋಗ ನಿಧಿ ಯೋಜನೆ ಜಾರಿಗೆ ನಿರ್ಣಯ ಕೈಕೊಳ್ಳಲಾಗಿದೆ. ಜಿಲ್ಲೆಗಳಲ್ಲಿ ಹೊಸದಾಗಿ ಉದ್ಯೋಗ ಸೃಷ್ಟಿಸೊ ಕಂಪನಿಗಳ ಮಾಲೀಕರಿಗೆ, ಪ್ರತಿ ಉದ್ಯೋಗಿಯ ಮೇಲೆ ಮಾಸಿಕ 2,500 ಪ್ರೋತ್ಸಾಹ ಧನವನ್ನು ನೀಡಲಾಗುತ್ತದೆ ಎಂದು ಸಿಎಂ ಘೋಷಿಸಿದರು.

## ಸಿಎಂ ಡಿ ಕೆ ಶಿವಕುಮಾರ್ ಘೋಷಿಸಿದ ಹೊಸ ಯೋಜನೆಗಳು



'ಸೇವಾ ಒನ್' ನ್ನು ರಾಜ್ಯದ 'ಒನ್ ಗವರ್ನ್‌ಮೆಂಟ್, ಒನ್ ಡಿಜಿಟಲ್' ವೇದಿಕೆಯಾಗಿ ಪರಿಚಯಿಸಲಾಗಿದ್ದು, ಒಂದೇ ಡಿಜಿಟಲ್ ವೇದಿಕೆಯ ಮೂಲಕ ನಾಗರಿಕರು ಸರ್ಕಾರಿ ಸೇವೆಗಳನ್ನು ಪಡೆಯಲು ಹಾಗೂ ತಮ್ಮ ಅಗತ್ಯಗಳನ್ನು ಸರ್ಕಾರಕ್ಕೆ ತಿಳಿಸಲು ಇದು ಸಹಕಾರಿಯಾಗಲಿದೆ.

ಕೃಷಿಯನ್ನು ಹೆಚ್ಚು ಲಾಭದಾಯಕವಾಗಿಸುವ ಉದ್ದೇಶದಿಂದ 'ಮುಖ್ಯಮಂತ್ರಿ ರೈತ ಚೈತನ್ಯ' ಯೋಜನೆ ಆರಂಭಿಸಲಾಗಿದೆ. ಮೊದಲ ಹಂತದಲ್ಲಿ ಮಂಡ್ಯ, ಬೆಳಗಾವಿ, ವಿಜಯಪುರ, ಹಾಸನ ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ಯೋಜನೆ ಜಾರಿಗೊಳಿಸಲಾಗಿದ್ದು, ಮುಂದಿನ ದಿನಗಳಲ್ಲಿ ಎಲ್ಲ ಜಿಲ್ಲೆಗಳಿಗೂ ವಿಸ್ತರಿಸುವ ಉದ್ದೇಶವಿದೆ.

BMTC 2.0 ಮೊಬೈಲ್ ಅಪ್ಲಿಕೇಶನ್ ಮೂಲಕ ಪ್ರಯಾಣಿಕರು ಬಸ್‌ಗಳ ಸಂಚಾರವನ್ನು ಲೈವ್ ಆಗಿ ಟ್ರ್ಯಾಕ್ ಮಾಡಬಹುದು. ಬಸ್‌ಗಳ ಆಗಮನದ ಸಮಯ ಹಾಗೂ ಮಾರ್ಗಗಳನ್ನು ಪರಿಶೀಲಿಸುವುದು, ಡಿಜಿಟಲ್ ಮೂಲಕ ಟಿಕೆಟ್ ಖರೀದಿಸುವುದು ಮತ್ತು ವ್ಯಾಲೆಟ್ ಸೌಲಭ್ಯ ಬಳಸುವುದಕ್ಕೂ ಅವಕಾಶವಿದೆ.

ಇದಲ್ಲದೆ, ವಿವಿಧ ಸಾರಿಗೆ ವ್ಯವಸ್ಥೆಗಳನ್ನು ಒಳಗೊಂಡ ಮಲ್ಟಿಮೋಡಲ್ ಜರ್ನಿ ಪ್ಲಾನರ್, ಬಿಎಂಟಿಸಿ ಮತ್ತು ನಮ್ಮ ಮೆಟ್ರೋಗೆ ಸಂಯೋಜಿತ ಟಿಕೆಟ್ ವ್ಯವಸ್ಥೆ ಹಾಗೂ ದೈನಂದಿನ, ಸಾಪ್ತಾಹಿಕ ಮತ್ತು ಮಾಸಿಕ ಪಾಸ್‌ಗಳ ಸೌಲಭ್ಯವನ್ನೂ ಆ್ಯಪ್ ಒದಗಿಸಲಿದೆ.

'ಒನ್ ಕರ್ನಾಟಕ ಮೊಬಿಲಿಟಿ ಆ್ಯಪ್ – ಕೆಎಸ್ ಆರ್ ಟಿಸಿ ಅವತಾರ 2.0' ಮೂಲಕ ರಾಜ್ಯದ ನಾಲ್ಕು ಸಾರಿಗೆ ನಿಗಮಗಳು ನಿರ್ವಹಿಸುವ ಬಸ್‌ಗಳ ಟಿಕೆಟ್‌ಗಳನ್ನು ಆ್ಯಪ್ ಅಥವಾ ವಾಟ್ಸ್‌ಆ್ಯಪ್ ಮೂಲಕ ಕಾಯ್ದಿರಿಸಲು ಸಾಧ್ಯವಾಗಲಿದೆ.

ರಾಜ್ಯಾದ್ಯಂತ ಬಡವರಿಗೆ 15 ಲಕ್ಷ ನಿವೇಶನ ಹಂಚಿಕೆ ಗುರಿ ಹೊಂದಲಾಗಿದೆ. ಪ್ರತಿ ಜಿಲ್ಲೆಯಲ್ಲಿ 50 ಸಾವಿರ ನಿವೇಶನ ಹಂಚೋದಕ್ಕೆ ಸಂಪುಟ ಸಭೆಯಲ್ಲಿ ನಿರ್ಧರಿಸಲಾಗಿದೆ. ಮೊದಲ ಹಂತದಲ್ಲಿ 5 ಲಕ್ಷ ಸೈಟುಗಳನ್ನು 30 ಜಿಲ್ಲೆಗೆ ಹಂಚಲಿದ್ದಾರೆ. ಎಲ್ಲಾ ಡಿಸಿಗಳಿಗೆ ಸ್ಥಳ ಗುರುತಿಸಲು ಸೂಚಿಸಲಾಗಿದೆ. ಎಸ್‌ಸಿ ಎಸ್‌ಟಿ ಓಬಿಸಿ ವರ್ಗಕ್ಕೆ ಮೊದಲ ಪ್ರಾತಿನಿಧ್ಯ ನೀಡಲಾಗುತ್ತದೆ.

ಕರ್ನಾಟಕದ ಸಮಗ್ರ ಅಭಿವೃದ್ಧಿಗೆ ಸರ್ಕಾರ ಬದ್ಧವಾಗಿದೆ ಎಂದು ಮುಖ್ಯಮಂತ್ರಿಗಳು ಘೋಷಿಸಿದರು.

# ಶಿವಾನಂದ ತಗಡೂರ ವಿರುದ್ಧದ ಸುಳ್ಳು ಆರೋಪಗಳಿಗೆ ಖಂಡನೆ

## ಇಂಡಿ ಪತ್ರಕರ್ತರಿಂದ ಕಂದಾಯ ಉಪವಿಭಾಗಾಧಿಕಾರಿ ಚಿದಾನಂದ ಗುರುಸ್ವಾಮಿ ಅವರಿಗೆ ಮನವಿ




■ ಉದಯರಶ್ಮಿ ದಿನಪತ್ರಿಕೆ

ಇಂಡಿ: ಶಿವಾನಂದ ತಗಡೂರ ಅವರು ರಾಜ್ಯದ ಪತ್ರಕರ್ತರ ಹಕ್ಕುಗಳಿಗಾಗಿ ನಿರಂತರ ಹೋರಾಟ ನಡೆಸುತ್ತಿರುವ ನಾಯಕರಾಗಿದ್ದು, ಅವರ ವಿರುದ್ಧ ಮಾಡಲಾಗುತ್ತಿರುವ ಆರೋಪಗಳು ದುರುದ್ದೇಶಪೂರಿತವಾಗಿವೆ. ಸತ್ಯಾಸತ್ಯತೆ ಪರಿಶೀಲಿಸದೆ ಆರೋಪ ಮಾಡುವ ಪ್ರವೃತ್ತಿಗೆ ಕಡಿವಾಣ ಬೀಳಬೇಕೆಂದು ಹಿರಿಯ ಪತ್ರಕರ್ತ ಎ.ಸಿ. ಪಾಟೀಲ ಒತ್ತಾಯಿಸಿದರು.

ಗುರುವಾರ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರ ಅವರ ವಿರುದ್ಧ ಕೆಲವರು ಮಾಡಿರುವ ಆಧಾರ ರಹಿತ ಹಾಗೂ ಸುಳ್ಳು ಆರೋಪಗಳನ್ನು ಖಂಡಿಸಿ ಪತ್ರಕರ್ತರು ಕಂದಾಯ ಉಪವಿಭಾಗಾಧಿಕಾರಿ ಚಿದಾನಂದ ಗುರುಸ್ವಾಮಿ ಅವರಿಗೆ ಮನವಿ ಸಲ್ಲಿಸುವ ಸಂದರ್ಭದಲ್ಲಿ ಅವರು ಮಾತನಾಡಿದರು.

ಪ್ರಾಮಾಣಿಕವಾಗಿ ಕಾರ್ಯ ಮಾಡುವವರ ತೇಜೋವಧೆ ಸರಿಯಲ್ಲ. ಇಡೀ ಪತ್ರಕರ್ತರ ಸಮಸ್ಯೆಗಳಿಗೆ ಪ್ರಾಮಾಣಿಕವಾಗಿ ಸ್ಪಂದಿಸುವ ಕಾರ್ಯ ಶಿವಾನಂದ ತಗಡೂರ ಮಾಡಿದ್ದಾರೆ ಎಂದರು.

ಇನ್ನೋರ್ವ ಹಿರಿಯ ಪತ್ರಕರ್ತ ಉಮೇಶ ಕೋಳೇಕರ ಮಾತನಾಡಿ, ಪತ್ರಕರ್ತರ ಸಂಘವನ್ನು ದುರ್ಬಲಗೊಳಿಸುವ ಉದ್ದೇಶದಿಂದ ಕೆಲವರು ಸುಳ್ಳು ಆರೋಪಗಳನ್ನು ಮಾಡುತ್ತಿದ್ದಾರೆ ಎಂದು ಆರೋಪಿಸಿದರಲ್ಲದೆ, ಇಂತಹ ಬೆಳವಣಿಗೆಗಳು ಪತ್ರಕರ್ತರ ಏಕತೆಗೆ ಧಕ್ಕೆ ಉಂಟುಮಾಡಲಿದ್ದು, ಎಲ್ಲರೂ ಒಗ್ಗಟ್ಟಿನಿಂದ ಎದುರಿಸಬೇಕೆಂದರು.

ಉಮೇಶ ಬಳಬಟ್ಟಿ ಮಾತನಾಡಿ, ಆಧಾರರಹಿತ ಆರೋಪಗಳ ಮೂಲಕ ವ್ಯಕ್ತಿತ್ವ ಹರಣ ಮಾಡಲು ಯತ್ನಿಸುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಖಾಜು ಸಿಂಗೆಗೋಳ ಮಾತನಾಡಿ, ಸತ್ಯಾಂಶವನ್ನು ಪರಿಶೀಲಿಸಿ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಸರ್ಕಾರ ಮತ್ತು ಅಧಿಕಾರಿಗಳಿಗೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಪತ್ರಕರ್ತರಾದ ಯಲಗೊಂಡ ಬೇವನೂರ, ಶರಣು ಕಾಂಬಳೆ, ಶಂಕರ ಜಮಾದಾರ ಮಾತನಾಡಿದರು.

ಕಾನಿಪ ಸಂಘದ ಖಜಾಂಚಿ ಆನಂದ ಗಣಾಚಾರಿ, ಸಚಿನ್ ಇಂಡಿ, ಜೈಭೀಮ ಸಿಂಗೆ, ತುಕಾರಾಮ ಪವಾರ, ಗುರು ದಶವಂತ, ಅಲ್ಲಾಭಕ್ಷ ಗೋರೆ, ಲಾಲಸಿಂಗ ರಾಠೋಡ, ಮಲ್ಲು ಹಾವಿನಾಳಮಠ, ಫಯಾಜ ಬಾಗವಾನ, ಸಿದ್ದಯ್ಯ ಮಠ, ಚಂದ್ರಶೇಖರ ಮೇಲಿನಮನಿ ಸೇರಿದಂತೆ ಇನ್ನಿತರರು ಇದ್ದರು.

## ವಿಜಯಪುರದಲ್ಲಿ ಪದ್ಮಶ್ರೀ ಪ್ರಶಸ್ತಿ ಪುರಸ್ಕೃತೆ ಡಾ. ಮಂಜಮ್ಮ ಜೋಗತಿ ಅಭಿಮತ

# ಸಮಯಕ್ಕೆ ಗೌರವ ಕೊಟ್ಟರೆ ಜೀವನದಲ್ಲಿ ಸಾಧನೆ ಸಾಧ್ಯ



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜೀವನದಲ್ಲಿ ಸಮಯಕ್ಕೆ ಗೌರವ ಕೊಡಬೇಕು ಆಗ ಮಾತ್ರ ಜೀವನದಲ್ಲಿ ಏನಾದರೂ ಸಾಧಿಸಲು ಸಾಧ್ಯ ಎಂದು ಪದ್ಮಶ್ರೀ ಪ್ರಶಸ್ತಿ ಪುರಸ್ಕೃತೆ ಡಾ. ಮಂಜಮ್ಮ ಜೋಗತಿ ಹೇಳಿದರು.

ನಗರದ ಕಂದಗಲ್ ಹನುಮಂತರಾಯ ರಂಗಮಂದಿರದಲ್ಲಿ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ (ಎಬಿವಿಪಿ) ಆಯೋಜಿಸಿದ್ದ ತಾರುಣ್ಯ ಸಿಂಧು ಯುವತಿ ಸಮ್ಮೇಳನವನ್ನು ಉದ್ಘಾಟಿಸಿ ಮಾತನಾಡಿದ ಅವರು, ಜೀವನದಲ್ಲಿ ಯುವಕರು ತಂದೆ ತಾಯಿಗೆ ಗೌರವ ಕೊಡುವುದನ್ನು ಕಲಿಯಬೇಕು, ಅವರು ಕಷ್ಟ ಪಟ್ಟು ನಿಮ್ಮನ್ನು ಓದಿಸುತ್ತಾರೆ. ಅವರಿಗೆ ಮೋಸ ಮಾಡಬಾರದು ಎಂದು ಕಿವಿಮಾತು ಹೇಳಿದರು. ಇವತ್ತಿನ ಸಮಾಜದಲ್ಲಿ ಯಾರು ಯಾರನ್ನು ಗುರುತಿಸುವುದಿಲ್ಲ, ನಿಮ್ಮನ್ನು ನೀವೇ ಗುರುತಿಸಿಕೊಳ್ಳಬೇಕು, ಈ ಸಮಾಜದಲ್ಲಿ ಕಾಲು ಎಳೆಯುವವರೇ ಹೆಚ್ಚು, ಅದಕ್ಕೆ ನಾವು ಧೈರ್ಯವಾಗಿ ಮುನ್ನುಗ್ಗಬೇಕು, ಅವಾಗ ಮಾತ್ರ ಸಾಧಕರು ಆಗಲು ಸಾಧ್ಯ ಎಂದರು.

ವಿದ್ಯಾರ್ಥಿನಿಯರು ಮೊಬೈಲ್ ಬಳಕೆಯಿಂದ ದೂರವಿರಬೇಕು. ಮೊಬೈಲ್ ಅನ್ನು ಸದ್ಬಳಕೆ ಮಾಡಿಕೊಳ್ಳಬೇಕು ಹೊರತು ದುರುಪಯೋಗ ಮಾಡಿಕೊಳ್ಳಬಾರದು, ಮೊಬೈಲ್ ಬಳಕೆಯ ಸಮಯವನ್ನು ಪುಸ್ತಕವನ್ನು ಓದುವ ಕಡೆ ಗಮನ ಕಡೆ ಕೊಡಿ ಪುಸ್ತಕಗಳನ್ನು ಓದುವುದರಿಂದ ನಿಮ್ಮ ಜೀವನವು ತಲೆ ಎತ್ತುವ ಹಾಗೆ ಸಾಧನೆ ಮಾಡಲು ಸಾಧ್ಯವಾಗುತ್ತದೆ ಎಂದರು.

ಎಬಿವಿಪಿಯ ಪ್ರಾಂತ ಸಂಘಟನಾ ಕಾರ್ಯದರ್ಶಿ ವೆಂಕಟೇಶ ಡಾಂಗೆ ಮಾತನಾಡಿ, ಯುವತಿ ಸಮ್ಮೇಳನದ ಮೂಲಕ ನಮ್ಮ ದೇಶದ ಸಾಧಕ ಮಹಿಳೆಯರ ಇತಿಹಾಸ, ಮತ್ತು ನಮ್ಮ ದೇಶದ ಪರಂಪರೆಯನ್ನು ಮುಂದುವರೆಸಿಕೊಂಡು ಹೋಗಲು ಬೇಕಾಗುವ ವಾತಾವರಣವನ್ನು ಮೂಡಿಸುವ ಕಾರ್ಯವನ್ನು ಎಬಿವಿಪಿ ಮಾಡುತ್ತಿದೆ, ವಿದ್ಯಾರ್ಥಿ ಪರಿಷತ್ ವಿದ್ಯಾರ್ಥಿನಿಯರ ಸ್ವಯಂ ರಕ್ಷಣೆಗಾಗಿ ಮಿಷನ್ ಸಾಹಸಿ ಕಾರ್ಯಕ್ರಮ ಹೀಗೆ ಹಲವಾರು ಕಾರ್ಯಕ್ರಮಗಳನ್ನ ಆಯೋಜಿಸುತ್ತಾ ಬರುತ್ತಿದೆ ಎಂದರು. ಈ ಸಂದರ್ಭದಲ್ಲಿ ವಿಮಲಾ ಹಂದಿಗೋಳ, ಡಾ. ಸುಮಾ ಬೋಳರಡ್ಡಿ, ಐಶ್ವರ್ಯ ಅಸಂಗಿ, ಮಲ್ಲಮ್ಮ ಪಾಟೀಲ, ಸ್ನೇಹಾ ಚವ್ಹಾಣ ಉಪಸ್ಥಿತರಿದ್ದರು.



### ಭವ್ಯ ಶೋಭಾಯಾತ್ರೆ

ನಗರದ ಸಿದ್ದೇಶ್ವರ ದೇವಸ್ಥಾನದಿಂದ ಗಾಂಧಿ ವೃತ್ತದ ಮಾರ್ಗವಾಗಿ ಕಂದಗಲ್ ಹನುಮಂತರಾಯ ರಂಗಮಂದಿರದವರೆಗೆ ನೂರಾರು ವಿದ್ಯಾರ್ಥಿಗಳು ಘೋಷಣೆ ಕೂಗುತ್ತಾ ಸಾಂಸ್ಕೃತಿಕ ಕಲಾ ತಂಡಗಳ ಜೊತೆಗೆ ಭವ್ಯ ಶೋಭಾಯಾತ್ರೆಯು ನಡೆಯಿತು. ಶೋಭಾಯಾತ್ರೆಗೆ ಎಬಿವಿಪಿಯ ಕೇಂದ್ರೀಯ ಕಾರ್ಯಸಮಿತಿ ಸದಸ್ಯರಾದ ಸಚಿನ ಕುಳಗೇರಿ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಡಾ.ಅಮಿತಕುಮಾರ ಬಿರಾದಾರ, ಎಂ ಎಸ್ ಬಿರಾದಾರ, ಹರ್ಷಾ ನಾಯಕ, ಹಣಮಂತ ಹಳ್ಳೂರ, ಪ್ರಥಮೇಶ ವಾಗ್ಮೋಡಿ, ಮಂಜುನಾಥ ಹಳ್ಳಿ,ವಿನಾಯಕ ಹಿರೇಮಠ, ಸ್ನೇಹಾ ಹಿರೇಮಠ, ದಾನಮ್ಮ ಹೊಸಮನಿ ಉಪಸ್ಥಿತರಿದ್ದರು.

# ಭರದಿಂದ ನಡೆದ ಕೃತಕ ಹೊಂಡ ನಿರ್ಮಾಣ ಕಾರ್ಯ

■ ಉದಯರಶ್ಮಿ ದಿನಪತ್ರಿಕೆ



**ಗಣೇಶ ಮೂರ್ತಿಗಳ ಸುರಕ್ಷಿತ ಹಾಗೂ ಪರಿಸರ ಸ್ನೇಹಿ ವಿಸರ್ಜನೆಗೆ ಅನುಕೂಲ | ಪಾಲಿಕೆ ಆಯುಕ್ತರಾದ ವಿಜಯ ಮೆಕ್ಕಳಕಿ ಹೇಳಿಕೆ**

ವಿಜಯಪುರ : ಗಣೇಶೋತ್ಸವದ ಹಿನ್ನೆಲೆಯಲ್ಲಿ ನಗರದಲ್ಲಿ ಗಣೇಶ ಮೂರ್ತಿಗಳ ಸುರಕ್ಷಿತ ಹಾಗೂ ಪರಿಸರ ಸ್ನೇಹಿ ವಿಸರ್ಜನೆಗೆಅನುಕೂಲವಾಗುವಂತೆ ಮಹಾನಗರ ಪಾಲಿಕೆಯು ಜೈಲ್ ದರ್ಗಾ ಹಾಗೂ ಕೆಎಸ್‌ಆರ್‌ಟಿಸಿ ಸ್ಯಾಟ್ ಲೈಟ್ ಬಸ್ ನಿಲ್ದಾಣದ ಸಮೀಪ ಕೃತಕ ಗಣೇಶ ವಿಸರ್ಜನಾ ಹೊಂಡಗಳ ನಿರ್ಮಾಣ ಕಾಮಗಾರಿಯನ್ನು ಕೈಗೆತ್ತಿಕೊಂಡಿದ್ದು, ಭರದಿಂದ ಕಾಮಗಾರಿ ನಡೆದಿದೆ ಎಂದು ಪಾಲಿಕೆ ಆಯುಕ್ತರಾದ ವಿಜಯ ಮೆಕ್ಕಳಕಿ ಅವರು ತಿಳಿಸಿದ್ದಾರೆ.

ಸಾರ್ವಜನಿಕರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಹಾಗೂ ವಿಸರ್ಜನಾ ಪ್ರಕ್ರಿಯೆಯನ್ನು ವ್ಯವಸ್ಥಿತವಾಗಿ ನಿರ್ವಹಿಸುವ ಉದ್ದೇಶದಿಂದ ಈ ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ.

ನಿರ್ಮಾಣ ಹಂತದಲ್ಲಿರುವ ಈ ಹೊಂಡಗಳ ಹತ್ತಿರ ಅಗತ್ಯ ಮೂಲಭೂತ ಸೌಕರ್ಯಗಳು ಮತ್ತು ಸುರಕ್ಷತಾ ವ್ಯವಸ್ಥೆಗಳನ್ನು ಕಲ್ಪಿಸಲಾಗುವುದು ಎಂದವರು ತಿಳಿಸಿದ್ದಾರೆ. ಪರಿಸರ ಸಂರಕ್ಷಣೆಯ ಹಿತದೃಷ್ಟಿಯಿಂದ ಸಾರ್ವಜನಿಕರು ಹಾಗೂ ಗಣೇಶ ಮಂಡಳಿಗಳು ಪಾಲಿಕೆಯಿಂದ ಸಿದ್ಧಪಡಿಸಲಾಗುತ್ತಿರುವ ಕೃತಕ ಹೊಂಡಗಳಲ್ಲೇ ಮೂರ್ತಿಗಳನ್ನು ವಿಸರ್ಜಿಸಿ ಸಹಕರಿಸಬೇಕೆಂದು ಆಯುಕ್ತರು ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

# ಆಲಮೇಲ ತಾಲೂಕು ಬರಗಾಲ ಘೋಷಣೆಗೆ ಆಗ್ರಹ

■ ಉದಯರಶ್ಮಿ ದಿನಪತ್ರಿಕೆ




ಆಲಮೇಲ: ತಾಲೂಕು ಬರಗಾಲ ಘೋಷಣೆ ಮಾಡುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಸಿರು ಸೇನೆ ಹಾಗೂ ರೈತ ಸಂಘಟನೆಗಳ ಒಕ್ಕೂಟ ದಿಂದ ಆಲಮೇಲ ತಾಲೂಕಿನ ರೈತರೊಂದಿಗೆ ಬೃಹತ್ ಪ್ರತಿಭಟನಾ ಮೆರವಣಿಗೆ ಮಾಡಲಾಯಿತು.

ಸಿಂದಗಿ ತಾಲೂಕಿನ ರೈತ ಸಂಘದ ಗೌರವಾಧ್ಯಕ್ಷ ಬಾಳು ಕುಂಬಾರ, ರೈತ ಸಂಘದ ಮಹಿಳಾ ಘಟಕದ ಅಧ್ಯಕ್ಷ ಜಗದೇವಿ ಬಿರಾದಾರ ಮಾತನಾಡಿ, ವಿಜಯಪುರ ಜಿಲ್ಲೆ ಸಂಪೂರ್ಣ ಬರಗಾಲ ಘೋಷಿಸಬೇಕು. ಇಲ್ಲದಿದ್ದರೆ ರಾಜ್ಯ ರಾಷ್ಟ್ರೀಯ, ಹೆದ್ದಾರಿ ಬಂದ್ ಮಾಡಿ ಪ್ರತಿಭಟಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಸಿಂದಗಿ ತಾಲೂಕಿನ ರೈತ ಸಂಘದ ಯುವ ಘಟಕದ ಅಧ್ಯಕ್ಷ ಪ್ರಶಾಂತ ಭೂಸನೂರ, ಶಶಿಧರ್ ನಾಯ್ಕೋಡಿ ಮಾತನಾಡಿ, ಜಿಲ್ಲೆಯ ಎಲ್ಲ ತಾಲೂಕುಗಳನ್ನು ಬರಗಾಲ ಘೋಷಣೆ ಮಾಡಬೇಕು. ಜಿಲ್ಲೆಯ ಬಹುತೇಕ ಆಡಳಿತ ಕಾಂಗ್ರೆಸ್ ಶಾಸಕರದ್ದೇ ಇದ್ದು ಸರ್ಕಾರಕ್ಕೆ ವಾಸ್ತವವನ್ನು ಮನವರಿಕೆ ಮಾಡಿ ಬರಗಾಲ ಘೋಷಿಸಲು ಒತ್ತಾಯಿಸಬೇಕೆಂದು ಮನವಿ ಮಾಡಿದರು. ಕವಿರಾಜ ಲಾಳಸಂಗಿ, ಹರೀಶ ಯಂಟಮಾನ ಮಾತನಾಡಿದರು. ಆಲಮೇಲ ಪಟ್ಟಣದ ಮೇನ್ ಬಜಾರ್ ದೇವಿ ಗುಡಿಯಿಂದ ಪ್ರಮುಖ ಬೀದಿಗಳಲ್ಲಿ ಬೃಹತ್ ಸಂಖ್ಯೆಯಲ್ಲಿ ರೈತರು ಮೆರವಣಿಗೆ ಮೂಲಕ ಘೋಷಣೆಗಳನ್ನು ಕೂಗುತ್ತಾ ಪ್ರತಿಭಟಿಸಿದರು. ನಂತರ ಬಸ್ ನಿಲ್ದಾಣ ಹತ್ತಿರದ ವೃತದಲ್ಲಿ ಮಾನವ ಸರಪಳಿ ನಿರ್ಮಿಸಿ ಪ್ರತಿಭಟಿಸಿ ಸರ್ಕಾರಕ್ಕೆ ತಹಶೀಲ್ದಾರ ಮೂಲಕ ಮನವಿ ಸಲ್ಲಿಸಿದರು. ಮನವಿ ಸ್ವೀಕರಿಸಿದ ತಹಸೀಲ್ದಾರ ಮಲ್ಲಣ್ಣ ಯಲಗೋಡ, ರೈತರ ಮನವಿಯನ್ನು ಸರ್ಕಾರಕ್ಕೆ ತಲುಪಿಸುತ್ತೇನೆ ಹಾಗೂ ತಾಲೂಕಾ ಆಡಳಿತದಿಂದಲೂ ಆಲಮೇಲ ತಾಲೂಕು ಬರಗಾಲ ಘೋಷಣೆಗೆ ಮನವಿ ಮಾಡಲಾಗುವುದು ಎಂದು ಹೇಳಿದರು.

ಅಳ್ಳೊಳ್ಳಿ ಮಠದ ಶ್ರೀಶೈಲಯ್ಯ ಮಹಾಸ್ವಾಮಿಗಳು, ಅರ್ಜುನಗಿ ಹಿರೇಮಠದ ಸಂಗನಬಸವ ಶಿವಾಚಾರ್ಯರು, ತಾಲೂಕು ಅಧ್ಯಕ್ಷ ಮಾಂತೇಶ ಕತ್ತಿ, ರಾಜು ಮೇತ್ರಿ, ಹೌಸಕುಮಾರ ಬಂಡಗಾರ, ಗೊಟು ಲಾವಟೆ, ರಾಮು ಲಾವಟೆ, ಈರಪ್ಪ ಮೇಟಿ, ಮಹೇಶ ಹೋನಳ್ಳಿ, ನಬಿ ಮೇಲಿನಮನಿ, ರಾಜು ಬಿರಾದಾರ ಸೇರಿದಂತೆ ನೂರಾರು ರೈತರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

**ರಾಜ್ಯ ರೈತ ಸಂಘ ಹಸಿರು ಸೇನೆ ಹಾಗೂ ರೈತ ಸಂಘಟನೆಗಳ ಒಕ್ಕೂಟ ದಿಂದ ಆಲಮೇಲ ತಾಲೂಕಿನ ರೈತರೊಂದಿಗೆ ಬೃಹತ್ ಪ್ರತಿಭಟನಾ ಮೆರವಣಿಗೆ**

# ಅರ್ಹ ಮತದಾರರು ಮತದಾರ ಪಟ್ಟಿಯಿಂದ ಹೊರಗುಳಿಯದಿರಲಿ

■ ಉದಯರಶ್ಮಿ ದಿನಪತ್ರಿಕೆ

**ಎಚ್ಚರಿಕೆಯಿಂದ ಕಾರ್ಯ ನಿರ್ವಹಿಸಲು ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಡಾ.ಆನಂದ್. ಕೆ ಸೂಚನೆ**



ವಿಜಯಪುರ: ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ-2026 (ಎಸ್ ಐಆರ್) ಪ್ರಕ್ರಿಯೆಗೆ ಸಂಬಂಧಿಸಿದಂತೆ ಕಳೆದ ಆಗಸ್ಟ್ 24 ರಂದು ಕರಡು ಮತದಾರರ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ಈ ಪಟ್ಟಿಯಲ್ಲಿ ಹೆಸರು ಬಿಟ್ಟುಹೋಗಿರುವ ಅರ್ಹ ಮತದಾರರು ಹಾಗೂ ಹೊಸದಾಗಿ ಮತದಾರರ ಪಟ್ಟಿಗೆ ಸೇರ್ಪಡೆಯಾಗಲು ಬಯಸುವ ಸಾರ್ವಜನಿಕ-ರಿಗೆ ಅರ್ಜಿ ಸಲ್ಲಿಸಲು ಸೆ. 23 ರವರೆಗೆ ಅವಕಾಶ ಕಲ್ಪಿಸಲಾಗಿದ್ದು, ಸಂಬಂಧಿಸಿದ ಅಧಿಕಾರಿಗಳು ಅರ್ಹ ಮತದಾರರು ಮತದಾರರ ಪಟ್ಟಿಯಿಂದ ಹೊರಗುಳಿಯದಂತೆ ನೋಡಿಕೊಳ್ಳಲು ಅಗತ್ಯ ಎಚ್ಚರಿಕೆ ವಹಿಸಬೇಕು ಎಂದು ಜಿಲ್ಲಾಧಿಕಾರಿಗಳಾದ ಡಾ. ಆನಂದ ಕೆ. ಅವರು ತಿಳಿಸಿದ್ದಾರೆ.

ನಗರದ ಜಿಲ್ಲಾಧಿಕಾರಿ ಕಚೇರಿ ಕೇಸ್ವಾನ ಸಭಾಂಗಣದಲ್ಲಿ ಬುಧವಾರ ನಡೆದ ವಿಡಿಯೋ ಸಂವಾದ ಸಭೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಮಾಹಿತಿ ತಾರ್ಕಿಕವಾಗಿ ಹೊಂದಾಣಿಕೆಯಾಗದ ಮತ್ತು 2002ರ ಮತದಾರರ ಪಟ್ಟಿಗೆ ಮ್ಯಾಪಿಂಗ್ ಆಗದ ಜಿಲ್ಲೆಯ ಒಟ್ಟು 24,524 ಮತದಾರರಿಗೆ ಮತದಾರರ ನೋಂದಣಾಧಿಕಾ-ರಿಗಳು ವಿಚಾರಣೆ ಪ್ರಕ್ರಿಯೆ ನಡೆಸುತ್ತಿದ್ದಾರೆ. ಇಂತಹ ಮತದಾರ-ರಿಗೆ ಈಗಾಗಲೇ ನೋಟಿಸ್ ನೀಡಲಾಗುತ್ತಿದ್ದು, ನೋಟಿಸ್‌ನಲ್ಲಿಯೇ ವಿಚಾರಣೆಯ ಸ್ಥಳ ಹಾಗೂ ದಿನಾಂಕವನ್ನು ನಮೂದಿಸಲಾಗಿದೆ. ಬಹು ಎಚ್ಚರಿಕೆಯಿಂದ ಕಾರ್ಯನಿರ್ವಹಿಸಿ, ಅವರು ವಿಚಾರಣೆಗೆ ಬಂದ ಸಂದರ್ಭದಲ್ಲಿ ದಾಖಲೆ ನೀಡಿಲ್ಲ ಎಂಬ ಆ ಧಾರದ ಮೇಲೆ ನಿರ್ಧರಿಸದೇ ಮತ್ತೊಂದು ಬಾರಿ ಅವರಿಗೆ ಅವಕಾಶ ನೀಡಬೇಕು. ಒಟ್ಟಾರೆ ಚುನಾವಣಾ ಆಯೋಗದ ನಿರ್ದೇಶಾನುಸಾರ ಕ್ರಮವಹಿಸಬೇಕು ಎಂದ ಅವರು, ಮರಣ ಪ್ರಮಾಣ ಪತ್ರ ತೆಗೆದುಕೊಂಡು ಡಿಲೀಟ್ ಮಾಡಲು ಕ್ರಮವಹಿಸಬೇಕು ಎಂದರು.

ಮತಗಟ್ಟೆವಾರು ನೋಟೀಸ್ ಸಮಯದೊಳಗೆ ನೀಡಬೇಕು. ಸಾಕಷ್ಟು ಸಮಯ ಒದಗಿಸಿ ನೋಟೀಸ್ ನೀಡಲು ಅಧಿಕಾರಿಗಳಿಗೆ ಸೂಚಿಸಿದರು. ನೋಟಿಸ್ ಪಡೆದ ಮತದಾರರು ನಿಗದಿತ ದಿನಾಂಕದಂದು ಅಗತ್ಯ ದಾಖಲೆಗಳೊಂದಿಗೆ ವಿಚಾರಣಾ ಸ್ಥಳಕ್ಕೆ ಹಾಜರಾಗಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಬೇಕಾಗಿ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು. ಸ್ಥಳೀಯ ಆಡಳಿತದ ಸಹಕಾರ ಪಡೆದುಕೊಂಡು ಸಂಬಂಧಿಸಿದ ಮತದಾರರಿಗೆ ತಿಳಿ ಹೇಳಬೇಕು. ನೋಟೀಸ್ ನೀಡಿದರೂ ಬರದೇ ಇದ್ದರು ಖುದ್ದಾಗಿ ವಿಸಿ ಮಾಡಿ ಕರೆ ಮಾಡಿ ಮುಂಚಿತವಾಗಿ ತಿಳಿಸಿ ಕ್ರಿಯಾಶೀಲತೆಯಿಂದ ಕಾರ್ಯನಿರ್ವಹಿಸಬೇಕು. ತಲಾಟಿ, ಡಾಟಾ ಎಂಟ್ರಿ ಆಪರೇಟರ್ ಅವರನ್ನು ಇದರಲ್ಲಿ

ತೊಡಗಿಸಿಕೊಸಿಕೊಂಡು ವ್ಯವಸ್ಥಿತವಾಗಿ ಕಾರ್ಯ ನಿರ್ವಹಿಸಲು ಸೂಚಿಸಿದ ಅವರು, ಸೂಕ್ಷ್ಮವಾಗಿ ಈ ಪ್ರಕ್ರಿಯೆ ಪೂರ್ಣಗೊಳಿಸಬೇಕು ಎಂದೂ ಜಿಲ್ಲಾಧಿಕಾರಿ ಸಲಹೆ ಮಾಡಿದರು.

ಸೆಪ್ಟೆಂಬರ್ 19 ಮತ್ತು 20 ರಂದು ವಿಶೇಷ ಆಂದೋಲನ: ಕರಡು ಮತದಾರರ ಪಟ್ಟಿಯಲ್ಲಿ ಹೆಸರು ಇಲ್ಲದಿರುವ ಅರ್ಹ ಮತದಾರರು ಮತ್ತು ಅಕ್ಟೋಬರ್ 01, 2026 ಕ್ಕೆ 18 ವರ್ಷ ಪೂರೈಸುವ ಯುವ ಮತದಾರರ ಅನುಕೂಲಕ್ಕಾಗಿ ದಿನಾಂಕ 19-09-2026 (ಶನಿವಾರ) ಮತ್ತು 20-09-2026 (ಭಾನುವಾರ) ರಂದು ಜಿಲ್ಲೆಯ ಎಲ್ಲಾ ಮತಗಟ್ಟೆಗಳಲ್ಲಿ ವಿಶೇಷ ಆಂದೋಲನ ಹಮ್ಮಿಕೊಳ್ಳಲಾಗಿದೆ. ಈ ದಿನಗಳಲ್ಲಿ ಸಂಬಂಧಪಟ್ಟ ಮತಗಟ್ಟೆ ಅಧಿಕಾರಿಗಳು ಬೆಳಿಗ್ಗೆಯಿಂದಲೇ ತಮ್ಮ ತಮ್ಮ ಮತಗಟ್ಟೆಗಳಲ್ಲಿ ಲಭ್ಯವಿರುತ್ತಾರೆ ಎಂದರು.

ಹೊಸದಾಗಿ ಹೆಸರು ಸೇರ್ಪಡೆಗಾಗಿ ನಮೂನೆ-6ಎ: ಅನಿವಾಸಿ ಭಾರತೀಯರಿಗಾಗಿ ನಮೂನೆ-7: ಪಟ್ಟಿಯಿಂದ ಹೆಸರು ತೆಗೆದುಹಾಕಲು (ಆಕ್ಷೇಪಣೆ) ನಮೂನೆ-8: ವಿಳಾಸ ಬದಲಾವಣೆ, ಹೆಸರು ತಿದ್ದುಪಡಿ ಮತ್ತು ಗುರುತಿನ ಚೀಟಿ ಬದಲಾವಣೆಗಾಗಿ ಆನ್‌ಲೈನ್ ಹಾಗೂ ಕಚೇರಿ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ ಎಂಬುದನ್ನು ಅಧಿಕಾರಿಗಳು ಮನವರಿಕೆ ಮಾಡಿಕೊಡಲು ಸೂಚಿಸಿದರು.

ವಿಶೇಷ ಆಂದೋಲನದ ದಿನಗಳನ್ನು ಹೊರತುಪಡಿಸಿ, ಬಾಕಿ ಉಳಿದ ದಿನಗಳಲ್ಲಿ ಸಾರ್ವಜನಿಕರು ಸಂಬಂಧಿಸಿದ ತಹಶೀಲ್ದಾರ್ ಕಚೇರಿ ಅಥವಾ ಮತದಾರರ ನೋಂದಣಾಧಿಕಾರಿಗಳ ಕಚೇರಿಗೆ ತೆರಳಿ ಅರ್ಜಿ ಸಲ್ಲಿಸಬಹುದು. ಜೊತೆಗೆ, ಭಾರತೀಯ ಚುನಾವಣಾ ಆಯೋಗದ ಅಧಿಕೃತ ವೆಬ್‌ಸೈಟ್ https://voters.eci.gov.in/ (Voter Service Portal) ಮೂಲಕವೂ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಅವಕಾಶವಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು. ಸಭೆಯಲ್ಲಿ ಜಿಪಂ ಸಿಇಒ ರಿಷಿ ಆನಂದ, ಅಪರ ಜಿಲ್ಲಾಧಿಕಾರಿ ಡಾ.ಔದ್ರಾಮ, ವಿಜಯಪುರ ಉಪ ವಿಭಾಗಾಧಿಕಾರಿ ಶ್ರೀಮತಿ ಜುಫಿಶಾನ್ ಹಕ್, ಇಂಡಿ ಉಪ ವಿಭಾಗಾಧಿಕಾರಿ ಚಿದಾನಂದ ಗುರುಸ್ವಾಮಿ, ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತ ರಾಜಶೇಖರ ಡಂಬಳ, ಪಾಲಿಕೆ ಉಪ ಆಯುಕ್ತ ಮಹಾವೀರ ಬೋರಣ್ಣವರ, ಚುನಾವಣಾ ತಹಶೀಲ್ದಾರ ಪವಾರ, ಜಿಲ್ಲಾಧಿಕಾರಿ ಕಚೇರಿಯ ಚುನಾವಣಾ ವಿಭಾಗದ ಸಚ್ಚಿದಾನಂದ ತೇರದಾಳ ಸೇರಿದಂತೆ ಅಧಿಕಾರಿಗಳು ಉಪಸ್ಥಿತರಿದ್ದರು.



**ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಹೇಶ ಪೋತದಾರ ಅಭಿಮತ**

## ಅಂಬೇಡ್ಕರ್ ಓದು ವಿದ್ಯಾರ್ಥಿಗಳಿಗೆ ಪ್ರೇರಣೆ ಪಾಠ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಡಾ. ಬಿ.ಆರ್. ಅಂಬೇಡ್ಕರ್ ಅವರು ರೈತರು, ಮಹಿಳೆಯರು, ಕಾರ್ಮಿಕರು ಹಾಗೂ ದುರ್ಬಲ ವರ್ಗಗಳ ಏಳಿಗೆಗಾಗಿ ನಿರಂತರವಾಗಿ ಹೋರಾಟ ನಡೆಸಿ, ಎಲ್ಲರಿಗೂ ಸಾಮಾಜಿಕ, ಆರ್ಥಿಕ ಹಾಗೂ ರಾಜಕೀಯ ನ್ಯಾಯ ದೊರಕಿಸಲು ಶ್ರಮಿಸಿದ ಮಹಾನ್ ವ್ಯಕ್ತಿಯಾಗಿದ್ದಾರೆ ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಹೇಶ ಪೋತದಾರ ಹೇಳಿದರು.

ನಗರದ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಸಭಾಭವನದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ವತಿಯಿಂದ ಮಂಗಳವಾರ ಆಯೋಜಿಸಿದ್ದ ಅಂಬೇಡ್ಕರ್ ಓದು ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿ, ಡಾ. ಬಿ.ಆರ್.ಅಂಬೇಡ್ಕರ್ ಅವರಲ್ಲಿದ್ದ ಓದಿನ ಹಂಬಲ, ಜ್ಞಾನಾರ್ಜನೆಯ ಆಸಕ್ತಿ ಹಾಗೂ ಶಿಕ್ಷಣದ ಮಹತ್ವವನ್ನು ವಿದ್ಯಾರ್ಥಿಗಳು ಅರಿತುಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದ ಅತಿಥಿಗಳಾಗಿ ಭಾಗವಹಿಸಿದ್ದ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಪ್ರಕಾಶ ಮೇತ್ರಿ ಮಾತನಾಡಿ, ಡಾ. ಅಂಬೇಡ್ಕರ್ ಅವರು ದೇಶಕ್ಕೆ ನೀಡಿದ ಸಂವಿಧಾನವು ಜಗತ್ತಿನಲ್ಲಿಯೇ ಶ್ರೇಷ್ಠವಾದದ್ದು. ಸಂವಿಧಾನದ ಆಶಯಗಳನ್ನು ಪಾಲಿಸುವ ಮೂಲಕ ದೇಶದ ಅಭಿವೃದ್ಧಿಗೆ ಪ್ರತಿಯೊಬ್ಬರೂ ಕೈಜೋಡಿಸಬೇಕು. ಸಾಮಾಜಿಕ ಅಸಮಾನತೆಗಳನ್ನು ತೊಡೆದುಹಾಕಲು ವಿದ್ಯಾರ್ಥಿಗಳು ಜಾಗೃತರಾಗಬೇಕು ಎಂದು ತಿಳಿಸಿದರು.


ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಿದ ಸಿ.ಎಸ್. ಪೂಜಾರಿ ಅವರು, ಡಾ. ಬಿ.ಆರ್. ಅಂಬೇಡ್ಕರ್ ಅವರ ಬಾಲ್ಯ, ಶಿಕ್ಷಣ, ಹೋರಾಟ ಹಾಗೂ ಸಾಧನೆಗಳ ಕುರಿತು ವಿವರಿಸಿದರು.

ಕಾರ್ಯಕ್ರಮದಲ್ಲಿ ಭಾಷಣ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಪುಸ್ತಕಗಳನ್ನು ಬಹುಮಾನವಾಗಿ ವಿತರಿಸಲಾಯಿತು.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ರಾಜಶೇಖರ ಧೃವಾಡಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಂತೋಷ ಭೋವಿ, ಉಪನ್ಯಾಸಕಿ ಎಂ.ಎಂ. ದಖನಿ ಸೇರಿದಂತೆ ಕಾಲೇಜಿನ ಸಿಬ್ಬಂದಿ, ಇಲಾಖೆಯ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಧರ್ಮದ ಹೆಸರಿನಲ್ಲಿ ಅಸಹನೆ ಬೇಡ :ಕನ್ನೂರ

■ ಉದಯರಶ್ಮಿ ದಿನಪತ್ರಿಕೆ



**ಮುದ್ದೇಬಿಹಾಳದಲ್ಲಿ ಶ್ರೀ ಬಲಮುರಿ ಗಜಾನನ, ಶ್ರೀ ಗುಗ್ಗಳ ಬಸವೇಶ್ವರ ಹಾಗೂ ಶ್ರೀ ವೀರಭದ್ರೇಶ್ವರರ ಜಾತ್ರಾ ಮಹೋತ್ಸವ**

ಮುದ್ದೇಬಿಹಾಳ: ನಮ್ಮ ದೇಶದಲ್ಲಿ ಪ್ರತಿಯೊಂದು ಧರ್ಮದ ಜನಾಂಗದವರು ದೇವರ ಬಗ್ಗೆ ತಮ್ಮದೇ ಆದ ಭಕ್ತಿಭಾವ ಹೊಂದಿದ್ದಾರೆ. ಆದರೆ ಸದ್ಯದ ದಿನಮಾನಗಳಲ್ಲಿ ಕೆಲವರು ದೇವಸ್ಥಾನಗಳಿಗೆ ಹೋಗಬಾರದು, ಧಾರ್ಮಿಕ ಆಚರಣೆಗಳನ್ನು ಮಾಡಬಾರದು ಎಂಬ ಮನೋಭಾವವನ್ನು ಜನಸಾಮಾನ್ಯರಲ್ಲಿ ಬಿತ್ತುತ್ತಾ ಅಸಹನೆ ಮೂಡಿಸುತ್ತಿರುವುದು ಬೇಸರದ ಸಂಗತಿ ಎಂದು ಹಿರಿಯ ಸಾಹಿತಿ, ನಿವೃತ್ತ ಶಿಕ್ಷಕ ಎಸ್.ಬಿ. ಕನ್ನೂರ ಕಳವಳ ವ್ಯಕ್ತಪಡಿಸಿದರು. ಪಟ್ಟಣದ ಕಿಲ್ಲಾಗಲ್ಲಿಯಲ್ಲಿರುವ ಶ್ರೀ ಬಲಮುರಿ ಗಜಾನನ, ಶ್ರೀ ಗುಗ್ಗಳ ಬಸವೇಶ್ವರ ಹಾಗೂ ಶ್ರೀ ವೀರಭದ್ರೇಶ್ವರ ಜಾತ್ರಾ ಮಹೋತ್ಸವದಲ್ಲಿ ಶ್ರದ್ಧಾ ಭಕ್ತಿಯಿಂದ ಭಾಗಿಯಾಗಿ ಅವರು ಮಾತನಾಡಿದರು.

ಧರ್ಮವೆಂಬುದು ಪ್ರತಿಯೊಬ್ಬರ ವೈಯಕ್ತಿಕ ನಂಬಿಕೆ ಮತ್ತು ಭಾವನೆಯ ವಿಚಾರ. ಒಬ್ಬರ ನಂಬಿಕೆಯನ್ನು ಮತ್ತೊಬ್ಬರು ಗೌರವಿಸುವ ಮನೋಭಾವ ಬೆಳೆಸಿಕೊಳ್ಳಬೇಕು.ನಮ್ಮಸಂವಿಧಾನವೂಪ್ರತಿಯೊಬ್ಬರಿಗೂ ತನ್ನ ಧರ್ಮವನ್ನು ನಂಬುವ, ಆಚರಿಸುವ ಸ್ವಾತಂತ್ರವನ್ನು ನೀಡಿದೆ. ಒಂದು ಧರ್ಮದ ಆಚರಣೆಯನ್ನು ಪ್ರಶ್ನಿಸುವ ಅಥವಾ ಮತ್ತೊಂದು ಧರ್ಮದ ಜನರ ನಂಬಿಕೆಯನ್ನು ಕೀಳಾಗಿ ಕಾಣುವ ಮೂಲಕ ಸಮಾಜದಲ್ಲಿ ಆರೋಗ್ಯಕರ ವಾತಾವರಣ ನಿರ್ಮಾಣವಾಗುವುದಿಲ್ಲ. ಬದಲಾಗಿ ಪರಸ್ಪರರ ಧಾರ್ಮಿಕ ಭಾವನೆಗಳನ್ನು ಗೌರವಿಸುವುದ-ರಿಂದ ಮಾತ್ರ ಸಮಾಜದಲ್ಲಿ ಶಾಂತಿ, ಸೌಹಾರ್ದತೆ ಹಾಗೂ ಸಹಬಾಳ್ವೆ ಗಟ್ಟಿಯಾಗುತ್ತದೆ ಎಂದು ಹೇಳಿದರು.

ಮುಖಂಡ ಉದಯ ರಾಯಚೂರ, ನಿವೃತ್ತ ಶಿಕ್ಷಕ ಬಿ.ಎಸ್.ಚಳಗೇರಿ ಮಾತನಾಡಿದರು.

ಅಂದು ಬೆಳಗಿನ ಜಾವ 5 ಗಂಟೆಗೆ ಶ್ರೀ ವೀರಭದ್ರೇಶ್ವರರ ಪಲ್ಲಕ್ಕಿ ಹಾಗೂ ಕಳಸವು ತಂಗಡಗಿಯ ಕೃಷ್ಣಾ ನದಿಗೆ ಗಂಗಾಪೂಜೆಗೆ ತೆರಳಿತು. ಇತ್ತ ದೇವಸ್ಥಾನದಲ್ಲಿ ಮೂಲಮೂರ್ತಿಗೆ ಮಹಾರುದ್ರಾಭಿಷೇಕ ಸೇರಿದಂತೆ ವಿಶೇಷ ಪೂಜಾ ಕೈಂಕರ್ಯಗಳು ನೆರವೇ-ರಿದವು. ಗಂಗಾಸ್ಥಳದಿಂದ ಮರಳಿದ ಕಳಸ ಹಾಗೂ ಪಲ್ಲಕ್ಕಿಯನ್ನು ಪಟ್ಟಣದ ಶ್ರೀ ಪಿಲೇಕಮ್ಮದೇವಿ ದೇವಸ್ಥಾನದಿಂದ ಶ್ರೀ ವೀರಭದ್ರೇಶ್ವರ ದೇವಸ್ಥಾನದವರೆಗೆ ಸಕಲ ವಾದ್ಯವೈಭವಗಳೊಂದಿಗೆ ಭಕ್ತಿಭಾವದಿಂದ ಮೆರವಣಿಗೆಯಲ್ಲಿ ಕರೆತರಲಾಯಿತು.

ಈವೇಳೆ ಪುರವಂತರಾದ ಅಪ್ಪುಸಿದ್ದಾಪೂರ,ಗುರಯ್ಯ ಮುದ್ನೂಮಠ, ಶಶಿಕಾಂತ ಮುತ್ತಗಿ, ಕಾಂತು ಹೆಬ್ಬಾಳ, ಆನಂದ ಪತ್ತಾರ, ನಾಗು ಸಿದ್ದಾಪೂರ, ಚಂದ್ರಶೇಖರ ಪ್ಯಾಟಿಗೌಡರ ಹಾಗೂ ರುದ್ರಯ್ಯ ಹಿರೇಮಠ ಅವರು ಶ್ರೀ ವೀರಭದ್ರೇಶ್ವರರ ವಡಪುಗಳನ್ನು ಹೇಳುತ್ತ, ಸ್ವಾಮಿಯ ಮಹಿಮೆಯನ್ನು ಕೊಂಡಾಡಿ ಭಕ್ತಿಭಾವ ಸಮರ್ಪಿಸಿದರು.

ವೀರಶೈವ ಲಿಂಗಾಯತ ಸಮಾಜದ ಅಧ್ಯಕ್ಷ ಪ್ರಭುರಾಜ ಕಲಬುರ್ಗಿ ಭಕ್ತರಿಗೆ ಅನ್ನಪ್ರಸಾದ ಸೇವೆ ಏರ್ಪಡಿಸಿದ್ದರು. ಬಳಿಕ ವಿಧಿವಿಧಾನಗಳೊಂದಿಗೆ ಕಳಸವನ್ನು ದೇವಸ್ಥಾನದ ಶಿಖರಕ್ಕೇರಿಸಲಾಯಿತು.

ಅರ್ಚಕ ಸಿದ್ದಯ್ಯ ಮಹಾಂತಯ್ಯನಮಠ ಅವರು ವೀರಭದ್ರರ ಮೂಲಮೂರ್ತಿಯನ್ನು ವಿಶೇಷವಾಗಿ ಹೂ ಮಾಲೆಗಳೊಂದಿಗೆ ಅಲಂಕರಿಸಿ ಕಂಗೊಳಿಸುವಂತೆ ಮಾಡಿದ್ದರು.

ಜಾತ್ರಾಮಹೋತ್ಸವದಲ್ಲಿ ಪ್ರಮುಖರಾದ ಮಹಾಂತಪ್ಪ ನಾವದಗಿ, ಶ್ರೀಶೈಲ ಅಮರಣ್ಣವರ, ಸಿದ್ದಣ್ಣ ಹಳ್ಳೂರ, ಅಮರಪ್ಪ ಮೋಟಗಿ, ಬಸವರಾಜ ನಾಶಿ ಸೇರಿದಂತೆ ಅಧಿಕ ಭಕ್ತರು ಪಾಲ್ಗೊಂಡಿದ್ದರು.

## ಗುರುವೃಂದಕ್ಕೆ ಪುಷ್ಪವೃಷ್ಟಿಗೈದು ಸ್ವಾಗತಿಸಿದ ಶಿಷ್ಯವೃಂದ

■ ಉದಯರಶ್ಮಿ ದಿನಪತ್ರಿಕೆ



**ಬಸವನಬಾಗೇವಾಡಿಯಲ್ಲಿ ನಡೆದ ಗುರುವಂದನಾ ಕಾರ್ಯಕ್ರಮ । ಶ್ರೀ ಬಸವೇಶ್ವರ ಸರ್ಕಾರಿ ಪಪೂ ಕಾಲೇಜಿನ 2006-7ನೇ ಸಾಲಿನ ಎಸ್ಸೆಸ್ಸೆಲ್ಸಿ ಪ್ರೌಢಶಾಲಾ ವಿದ್ಯಾರ್ಥಿಗಳಿಂದ ಕಾರ್ಯಕ್ರಮ**

ಬಸವನಬಾಗೇವಾಡಿ: ಕಾಲದ ಚಕ್ರ ಉರುಳಿ 20 ವರ್ಷಗಳು ಕಳೆದರೂ, ಗುರು-ಶಿಷ್ಯರ ನಡುವಿನ ಪ್ರೀತಿ, ಗೌರವ ಮತ್ತು ಆತ್ಮೀಯತೆ ಮಾತ್ರ ಎಂದಿಗೂ ಕಡಿಮೆಯಾಗುವುದಿಲ್ಲ ಎಂಬುದಕ್ಕೆ ಪಟ್ಟಣದಲ್ಲಿ ನಡೆದ ಗುರುವಂದನಾ ಕಾರ್ಯಕ್ರಮ ಸಾಕ್ಷಿಯಾಯಿತು.

ಪಟ್ಟಣದ ಶ್ರೀ ಬಸವೇಶ್ವರ ಸರ್ಕಾರಿ ಪದವಿ ಪೂರ್ವ ಕಾಲೇಜಿನ 2006-7ನೇ ಸಾಲಿನ ಖಖಖಆ ಪ್ರೌಢಶಾಲಾ ವಿಭಾಗದ ವಿದ್ಯಾರ್ಥಿಗಳಿಂದ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಈ ವೇಳೆ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸುತ್ತಿರುವ ವಿದ್ಯಾರ್ಥಿಗಳು ಪುಷ್ಪವೃಷ್ಟಿಗೈದು ಶಿಕ್ಷಕರನ್ನು ವೇದಿಕೆಗೆ ಬರಮಾಡಿಕೊಂಡರು.


ಒಂದೇ ಶಾಲೆಯ ಆವರಣದಲ್ಲಿ ಕಲಿತು, 20 ವರ್ಷಗಳ ನಂತರ ಮತ್ತೆ ಒಂದೇ ವೇದಿಕೆಯಲ್ಲಿ ಸೇರಿ, ಶಾಲೆಯಲ್ಲಿ ಕಳೆದ ತಮ್ಮ ಬಾಲ್ಯದ ಸಿಹಿ-ಕಹಿ ನೆನಪುಗಳನ್ನು ವಿದ್ಯಾರ್ಥಿಗಳು ಮೆಲುಕು ಹಾಕುವ ಮೂಲಕ ತಮ್ಮ ಅನಿಸಿಕೆ ಹಂಚಿಕೊಂಡರು.

ಸ್ನೇಹ ಸಮ್ಮಿಲನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ನಿವೃತ್ತ ಮುಖ್ಯ ಶಿಕ್ಷಕ ಎಸ್. ಎಸ್. ಕುದರಕರ, ಗುರು ಎಂಬ ಪದಕ್ಕೆ ನಮ್ಮ ಭಾರತೀಯ ಸಂಸ್ಕೃತಿಯಲ್ಲಿ ಅನಾದಿಕಾಲದಿಂದಲೂ ಪೂಜ್ಯಭಾವನೆಯಿಂದ ನಾವುಗಳು ಗೌರವಿಸಿಕೊಂಡು ಬಂದಿದ್ದೇವೆ. ಅಂದಿನ ಗುರುಕುಲದ ಶಿಕ್ಷಣದಲ್ಲಿ ಗುರು-ಹಿರಿಯರಿಗೆ ಗೌರವಿಸುವ ಗುಣಗಳೊಂದಿಗೆ ಶಿಕ್ಷಣ ನೀಡಲಾಗುತ್ತಿತ್ತು. ಇಂದಿಗೂ ಅಂತಹ ಕಲಿಕಾ ಕ್ರಮಗಳು ಸರ್ಕಾರಿ ಶಾಲೆಗಳಲ್ಲಿ ದೊರೆಯುತ್ತಿದೆ. ಇದಕ್ಕೆ ಉದಾಹರಣೆಯಾಗಿ ಎರಡು ದಶಕ ಕಳೆದರೂ ಅಕ್ಷರ ಕಲಿಸಿದ ಗುರುಗಳನ್ನು ಸ್ಮರಿಸಿ ಹಿರಿಯ ವಿದ್ಯಾರ್ಥಿಗಳು ಸಮಾಗಮಗೊಂಡು ಗುರುವಂದನೆ ಸಲ್ಲಿಸುವ ಸಮಾರಂಭ ಏರ್ಪಡಿಸಲಾಗಿದೆ. ಮನೋಧರ್ಮಕ್ಕೆ ಅನುಗುಣವಾಗಿ ಶಿಕ್ಷಕ ವೃತ್ತಿ ಜೀವನ ಪೂರೈಸುವ ಮೂಲಕ ಸಮಾಜಕ್ಕೆ ಸುಸಂಸ್ಕೃತ ಹಾಗೂ ಉತ್ತಮ ಪ್ರಜೆಗಳನ್ನು ನೀಡಿದ್ದೇನೆಂಬ ಆತ್ಮತೃಪ್ತಿ ದೊರೆತಿದೆ ಎಂದು ಭಾವುಕರಾದರು.

ಹಳೆ ವಿದ್ಯಾರ್ಥಿಗಳ ಕುರಿತು ಬಹಳ ಮನಮುಟ್ಟುಹಾಗೆ ಮಾತನಾಡಿದ ನಿವೃತ್ತ ಶಿಕ್ಷಕ ಎಂ ಎಸ್ ಝುಳಕಿ, ಕಲಿಕೆ ನಿರಂತರ ಪ್ರಕ್ರಿಯೆಯಾಗಿದ್ದು ಎಲ್ಲರೂ ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ಒದಗಿಸುವ ಮೂಲಕ ಆರೋಗ್ಯ ಪೂರ್ಣ ಸಮಾಜವನ್ನು ನಿರ್ಮಾಣ ಮಾಡುವಂತೆ ಅವರು ಮನವಿ ಮಾಡಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ನಿ.ಶಿಕ್ಷಕ ಕೆ. ಎಸ್.ಕಾಖಂಡಕಿ, ಇಂದಿನ ಸಾಮಾಜಿಕ ವ್ಯವಸ್ಥೆಯಲ್ಲಿ ಸಹಮತ ಭಾಂದವ್ಯ ಎಂಬುದು ಕಷ್ಟದ ಮಾತು, ಈ ನಡುವೆಯೂ ಗುರುಗಳ ಮೇಲಿನ ಪ್ರೀತಿಯಿಂದ ಕಾರ್ಯಕ್ರಮ ರೂಪಿಸಿರುವುದು ನಿಜಕ್ಕೂ ಶ್ಲಾಘನೀಯ ಎಂದು ಹೇಳಿದರು.

ಕಾರ್ಯಕ್ರಮಕ್ಕೆ ಆಗಮಿಸಿದ ಎಸ್. ಎಸ್. ಝುಳಕಿ, ಎಸ್.ಎಸ್. ಕುದರಕರ, ಆರ್.ಎನ್. ಪೂಜಾರಿ, ಕೆ.ಎಸ್. ಕಾಖಂಡಕಿ, ಎಮ್. ಎಸ್. ಝುಳಕಿ, ಎಮ್.ಎಸ್. ಮನಹಳ್ಳಿ, ಎಸ್.ಕೆ. ಸೋಮನಕಟ್ಟಿ, ಕೆ.ಬಿ. ಕಡೆಮನಿ, ವಾಯ್.ಜಿ.ಮೇಟಿ, ಕೆ.ಎಸ್. ಕಾಖಂಡಕಿ, ಎ.ಎಸ್. ಬಾಳಿಕಾಯಿ, ಎಸ್.ಎಸ್. ಬಿರಾದಾರ, ಎಮ್.ಎಮ್. ಗುಡ್ಡವಾಡ, ಶ್ರೀಮತಿ ಎಸ್.ಬಿ. ಅಬಂಗಿ, ಶ್ರೀಮತಿ ಸಿ.ಜಿ.ಹುಳಗುಳಕರ, ಶ್ರೀಮತಿ ಎಸ್.ಎಸ್.ಕಡೇವಾಲ, ಶ್ರೀಮತಿ ಎಸ್.ಎಸ್.ಅಂಗಡಿ, ಶ್ರೀಮತಿ ಬಿ.ಜಿ. ದೊಡಮನಿ, ಶ್ರೀಮತಿ ಎ.ಬಿ.ಪಾಟೀಲ, ಶ್ರೀಮತಿ ಜಿ.ವಿ. ಗಬ್ಬೂರ, ಶ್ರೀಮತಿ ಬಿ.ಜಿ. ಬಿರಾದಾರ ಸೇರಿದಂತೆ ಎಲ್ಲ ಶಿಕ್ಷಕರನ್ನು ಸನ್ಮಾನಿಸಲಾಯಿತು.



**ಸರ್ಕಾರ ಜನತೆಗೆ ಸ್ಪಷ್ಟ ಉತ್ತರ ನೀಡಲು ಯುವ ಮುಖಂಡ ಸಂತೋಷ ಬಗಲಿ ಆಗ್ರಹ**

## ಯಾವ ಮಾನದಂಡದ ಮೇಲೆ ಬರಪೀಡಿತ ಪಟ್ಟಿಯಿಂದ ಹೊರಗಿಟ್ಟಿದ್ದೀರಿ?

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಿಲ್ಲೆಯ ಉಳಿದ ತಾಲೂಕುಗಳನ್ನು ಯಾವ ಮಾನದಂಡದ ಮೇಲೆ ಬರಪೀಡಿತ ಪಟ್ಟಿಯಿಂದ ಹೊರಗಿಟ್ಟಿದ್ದೀರಿ? ಸರ್ಕಾರ ಜಿಲ್ಲೆಯ ಜನತೆಗೆ ಸ್ಪಷ್ಟ ಉತ್ತರ ನೀಡಬೇಕು ಎಂದು ಯುವ ಮುಖಂಡ ಸಂತೋಷ ಬಗಲಿ ಆಗ್ರಹಿಸಿದ್ದಾರೆ. ನಗರದಲ್ಲಿ ಕಳೆದ ಕೆಲ ದಿನಗಳಿಂದ ನಡೆಯುತ್ತಿರುವ ಅನಿರ್ದಿಷ್ಟ ಹೋರಾಟಕ್ಕೆ ಬೆಂಬಲ ಸೂಚಿಸಿ ಮಾತನಾಡಿದ ಅವರು, ವಿಜಯಪುರ ಜಿಲ್ಲೆಯಲ್ಲಿ ಮಳೆಯ ಕೊರತೆ ಕೇವಲ ಮೂರು ತಾಲೂಕುಗಳಿಗೆ ಮಾತ್ರ ಸೀಮಿತವಾಗಿದೆಯೇ? ಉಳಿದ ತಾಲೂಕುಗಳಲ್ಲಿ ರೈತರ ಬೆಳೆಗಳು ಸಮೃದ್ಧವಾಗಿವೆಯೇ? ಅಲ್ಲಿನ ರೈತರಿಗೆ ನೀರಿನ ಸಮಸ್ಯೆ ಇಲ್ಲವೇ? ಜಾನುವಾರುಗಳಿಗೆ ಮೇವಿನ ಕೊರತೆ ಇಲ್ಲವೇ? ರೈತರು ಸಂಕಷ್ಟದಲ್ಲಿಲ್ಲವೇ? ಎಂಬ ಪ್ರಶ್ನೆಗಳಿಗೆ ಸರ್ಕಾರ ಉತ್ತರ ನೀಡಬೇಕು ಎಂದು ಅವರು ನೇರವಾಗಿ ಪ್ರಶ್ನಿಸಿದ್ದಾರೆ.

ಕಚೇರಿಗಳಲ್ಲಿ ಕುಳಿತು ತಯಾರಿಸಿದ ವರದಿಗಳ ಆಧಾರದ ಮೇಲೆ ರೈತರ ಭವಿಷ್ಯ ನಿರ್ಧರಿಸುವುದನ್ನು ಸರ್ಕಾರ ನಿಲ್ಲಿಸಬೇಕು. ನೆಲದ ವಾಸ್ತವಪರಿಸ್ಥಿತಿಅರಿಯಲುಸರ್ಕಾರದಸಚಿವರುಮತ್ತು ಅಧಿಕಾರಿಗಳು ಸ್ವತಃ ವಿಜಯಪುರ ಜಿಲ್ಲೆಯ ಪ್ರತಿಯೊಂದು ತಾಲೂಕಿಗೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕು ಎಂದು ಅವರು ಆಗ್ರಹಿಸಿದ್ದಾರೆ.

## 6 ಹೆದ್ದಾರಿಗಳಲ್ಲಿ ಎಐ ಆಧಾರಿತ ಕ್ಯಾಮೆರಾ ಅಳವಡಿಕೆ

ಕಲಬುರಗಿ:ಜಿಲ್ಲೆಯ ಸಾರ್ವಜನಿಕರ ಸುರಕ್ಷತೆ ಹಾಗೂ ರಸ್ತೆಗಳಲ್ಲಿ ಸುಗಮ, ಶಿಸ್ತುಬದ್ಧ ಸಂಚಾರವನ್ನು ಖಾತರಿಪಡಿಸುವ ಉದ್ದೇಶದಿಂದ ಜಿಲ್ಲಾ ಪೊಲೀಸ್ ಇಲಾಖೆಯು ಮಹತ್ವದ ಹೆಜ್ಜೆಯನ್ನಿಟ್ಟಿದೆ.

ರಸ್ತೆ ಸುರಕ್ಷತೆ ಎಂಬುದು ಪ್ರತಿಯೊಬ್ಬ ನಾಗರಿಕನ ಜೀವ ಹಾಗೂ ಕುಟುಂಬದ ಹಿತದೃಷ್ಟಿಯಿಂದ ಅತ್ಯಂತ ಮಹತ್ವದ್ದಾಗಿದ್ದು, ಸಂಚಾರ ನಿಯಮಗಳನ್ನು ಪಾಲಿಸುವ ಮೂಲಕ ಪ್ರತಿಯೊಬ್ಬರೂ ತಮ್ಮ ಹಾಗೂ ಇತರರ ಸುರಕ್ಷತೆಗೆ ಕೊಡುಗೆ ನೀಡಬಹುದಾಗಿದೆ. ಈ ನಿಟ್ಟಿನಲ್ಲಿ ಸಾರ್ವಜನಿಕರಿಗೆ ಇನ್ನಷ್ಟು ಸುರಕ್ಷಿತ ಹಾಗೂ ವ್ಯವಸ್ಥಿತ ಸಂಚಾರ ವಾತಾವರಣವನ್ನು ಒದಗಿಸುವ ಸಲುವಾಗಿ ಅತ್ಯಾಧುನಿಕ ಎಐ ಆಧಾರಿತ ಕ್ಯಾಮೆರಾಗಳನ್ನು ಅಳವಡಿಸಲಾಗಿದ್ದು, ಸಂಚಾರ ನಿಯಮ ಉಲ್ಲಂಘಿಸುವವರ ವಿರುದ್ಧ ಐಟಿಎಂ-ಎಸ್( ಇಂಟೆಲಿಜೆಂಟ್ ಟ್ರಾಫಿಕ್ ಮ್ಯಾನೇಜಮೆಂಟ್ ಸಿಸ್ಟಮ್) ತಂತ್ರಾಂಶದ ಮೂಲಕ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾ ಪೊಲೀಸ್ ವ-ರಿಷ್ಠಾಧಿಕಾರಿ ಅಡ್ಡೂರು ಶ್ರೀನಿವಾಸಲು ತಿಳಿಸಿದ್ದಾರೆ.

ಈ ಯೋಜನೆಯಡಿ ಕಲಬುರಗಿ ಜಿಲ್ಲೆಯ ಗೊಬ್ಬೂರ ವಾಡಿ-ಚೌಡಾಪೂರ ಹೆದ್ದಾರಿ, ಜೇವರ್ಗಿ- ಸಿಂಧಗಿ ಹೆದ್ದಾರಿ, ಕಲಬುರಗಿ- ಹುಮನಾಬಾದ ಹೆದ್ದಾರಿ, ಕಲಬುರಗಿ- ಸೇಡಂ ಹೆದ್ದಾರಿ, ಕಲಬುರಗಿ-ಆಳಂದ ಹೆದ್ದಾರಿ, ಶಹಾಬಾದ-ಯಾದಗಿರಿ ಹೆದ್ದಾರಿಗಳಲ್ಲಿ ಒಟ್ಟು 12 ಎಐ ಆಧಾರಿತ ಕ್ಯಾಮೆರಾಗಳನ್ನು ಅಳವಡಿಸಲಾಗಿದ್ದು, ಪ್ರಸ್ತುತ ಈ ಕ್ಯಾಮೆರಾಗಳ ಪ್ರಾಯೋಗಿಕ (ಟ್ರಯಲ್ ರನ್) ಚಾಲನೆಯು ಈಗಾಗಲೇ ಪ್ರಾರಂಭವಾಗಿದ್ದು, ಈ ಪ್ರಾಯೋಗಿಕ ಹಂತ ಪೂರ್ಣಗೊಂಡ ನಂತರ ಇವುಗಳನ್ನು ರಿಯಲ್-ಟೈಮ್ (ನೈಜ ಸಮಯ) ಆಧಾರದಲ್ಲಿ ಪೂರ್ಣ ಪ್ರಮಾಣದಲ್ಲಿ ಜಾ-ರಿಗೊಳಿಸಲಾಗುವುದು ಎಂದು ಅವರು ತಿಳಿಸಿದ್ದಾರೆ.

# ನನ್ನಪ್ಪ

## ಭಾವರಶ್ಮಿ

■ ಉದಯರಶ್ಮಿ ದಿನಪತ್ರಿಕೆ

ನನಗೀಗ ಹನ್ನೆರಡರ ಪ್ರಾಯ. ಹುಟ್ಟುತ್ತಲೇ ಬಹು ಅಂಗಾಂಗ ವೈಕಲ್ಯದಿಂದ ಹುಟ್ಟಿದ ನತದೃಷ್ಟ ಮಗು ನಾನು.

ಅಮ್ಮ ಸತ್ತಾಗ ನಾನಿನ್ನೂ ಏಳು ತಿಂಗಳ ಹಸುಗೂಸಂತೆ.

ಅದೇನೋ ಬಾಣಂತಿ ಸನ್ನಿಯಿಂದ ತೀರಿಹೋಗಿದ್ದಳು ಅಮ್ಮ. " ಅಮ್ಮನನ್ನು ತಿಂದುಕೊಂಡ ಮಾರಿ ಅವಳೊಂದಿಗೆ ಇದೂ ಕೂಡ ಹೋಗಿದ್ದರೆ ಅದೆಷ್ಟೋ ಚೆನ್ನಾಗಿತ್ತು.." ಅಜ್ಜಿಯ ಬಾಯಿಯಿಂದ ಪ್ರತಿ ಬಾರಿ ಕೇಳುವ ಮಾತಿದು. ಹಾಗಂತ ನನ್ನಜ್ಜಿ ಕೆಟ್ಟವಳೇನೂ ಅಲ್ಲ ಆದರೆ ಆಕೆಯ ಮಗನ ಮೇಲಿನ ಅಂದರೆ ನನ್ನಪ್ಪನ ಮೇಲಿನ ಮಮಕಾರದಿಂದ ಅಜ್ಜಿ ಹೇಳುತ್ತಿದ್ದ ಮಾತಾಗಿತ್ತದು. ಅವಳಿಗೂ ನನ್ನ ಪರಿಸ್ಥಿತಿ ಕಂಡು ಒಂದಿಷ್ಟು ಮರುಕವಿದ್ದರು ಅಪ್ಪನ ಜೀವನ ಕಿತ್ತುಕೊಂಡ ಶನಿಯಂತೆ ಕಂಡಿದ್ದೆ ತಾನು..



'ಭಗವಂತ ನನ್ನನ್ನು ಕೂಡ ನಿನ್ನ ಬಳಿ ಕರೆದುಕೋ, ಅಪ್ಪನಿಗೆ ನನ್ನಿಂದ ಮುಕ್ತಿ ನೀಡು' ಎಂದು ನಾನೂ ಕೂಡ ಬೇಡದೆ ಇದ್ದ ದಿನವೇ ಇಲ್ಲ. ಹುಟ್ಟುತ್ತಲೇ ವಿಕಲಾಂಗ ಚೇತನೆಯಾಗಿ ಹುಟ್ಟಿದ್ದು ನನ್ನ ತಪ್ಪೇ..? ನನಗೂ ನೋವು ನಲಿವಿದೆ, ಹೇಳಿಕೊಳ್ಳಲು ಸಾಧ್ಯವಾಗದೇ ನನ್ನೊಳಗೆಯೇ ಹುದುಗಿ ಹೋಗುವ ಅವೆಷ್ಟೋ ಭಾವನೆಗಳಿವೆ.ಅವೆಲ್ಲವೂಅರ್ಥವಾಗುತ್ತಿದ್ದುದ್ದುನನ್ನಪ್ಪನಿಗೆಮಾತ್ರ.. ಕೇವಲ ನನ್ನ ಕಣ್ಣುಗಳ ಭಾವ ಅರಿತು ನನ್ನ ಬೇಕು ಬೇಡಗಳನ್ನು ಪೂರೈಸುತ್ತಿದ್ದನೆಂದರೆ ಅಪ್ಪ ಅದೆಷ್ಟು ಜ್ಞಾನಿಯಾಗಿರಬೇಕು. ಅಪ್ಪ



ಅದೆಂತಾ ಮಹಾನ್ ತ್ಯಾಗಮಯಿಯೆಂದರೆ ನನಗಾಗಿ ಕೇವಲ ನನಗಾಗಿ ತನ್ನ ಬದುಕನ್ನು ಮುಡಿಪಾಗಿಟ್ಟ. ಅಜ್ಜಿ ಅಪ್ಪನಲ್ಲಿ ನನ್ನನ್ನು ಯಾವುದಾದರೂ ಅನಾಥಾಶ್ರಮದಲ್ಲಿ ಬಿಟ್ಟು ಇನ್ನೊಂದು ಮದುವೆಯಾಗಿ ಹಾಯಾಗಿರು ಮಗನೇ ಎನ್ನುವ ಮಾತು ಅದೆಷ್ಟು ಸಲ ಹೇಳಿದ್ದಳೋ ಕಾಣೆ. ಅಪ್ಪ ಸುತಾರಾಂ ಒಪ್ಪಿರಲಿಲ್ಲ. ಅಮ್ಮನ ಮೇಲಿಟ್ಟಿದ್ದ ನಿಷ್ಕಲ್ಮಶ ಪ್ರೀತಿ ಅಪ್ಪನನ್ನು ಕಟ್ಟಿ ಹಾಕಿತ್ತು." ತಮ್ಮಿಬ್ಬರ ಪ್ರೀತಿಯ ಫಲ ಇದು, ಎಂದಿಗೂ ದೂರ ಮಾಡಲಾರೆ" ಎಂದು ಅಜ್ಜಿಯ ಮಾತನ್ನು ಕಡೆಗಣಿಸಿ ನನ್ನ ಸೇವೆ ಮಾಡುತ್ತಾ ಬಂದ ನನ್ನಪ್ಪ. ಅಪ್ಪ ಪ್ರತಿದಿನ ಬೆಳಿಗ್ಗೆ ಕೆಲಸಕ್ಕೆ ಹೋಗುವ ಮೊದಲು ನನ್ನ ಕೈ ಕಾಲುಗಳಿಗೆ ಎಣ್ಣೆ ಹಚ್ಚಿ ಮಸಾಜು ಮಾಡಿ ಸಣ್ಣ ಪುಟ್ಟ ವ್ಯಾಯಾಮ ಮಾಡಿಸಿ ನಿತ್ಯ ಕರ್ಮ ಸ್ನಾನ ಮುಗಿಸಿ ದೇವರ ಮನೆಗೆ ಕರೆದೊಯ್ದು ಹಣೆಗೆ ಕುಂಕುಮವಿಟ್ಟು ಮುತ್ತಿಡುವಾಗ



ಅವನ ಕಣ್ಣಲ್ಲಿನ ಆ ಹೊಳಪು ನೋಡುವುದೇ ಸಂಭ್ರಮ ನನಗೆ. ಪ್ರೀತಿಯಿಂದ ತುತ್ತು ತಿನ್ನಿಸಿ ಮಲಗಿಸಿ ಹೋದರೆ ಮತ್ತೆ ಅಪ್ಪ ಕೆಲಸದಿಂದ ಮನೆಗೆ ಬರುವವರೆಗೂ ನಾಲ್ಕು ಗೋಡೆಗಳ ಮಧ್ಯದಲ್ಲೇ ಇರುತ್ತಿದ್ದ ನನ್ನನ್ನು ಸಂಜೆ ಮನೆಗೆ ಬಂದ ಕೂಡಲೇ ತನ್ನೆಲ್ಲ ಸುಸ್ತು ಸಂಕಟ ಮರೆತು ನಗು ನಗುತ್ತಾ ಹೆಗಲ ಮೇಲೆ ಹೊತ್ತು ಪಾರ್ಕಿಗೆ ಕರೆದುಕೊಂಡು ಹೋಗುವ.. ಅಲ್ಲಿ ಆಡುವ ಪುಟ್ಟ ಪುಟ್ಟ ಮಕ್ಕಳನ್ನು ಕಂಡು ನಾನೂ ಕೂಡಾ ಕೇಕೆ ಹಾಕಿ ನಗುವುದ ಕಂಡು ನನ್ನಪ್ಪನ ಕಣ್ಣಲ್ಲಿ ಆನಂದ ಭಾಷ್ಪ..

ದೇವರೇ ನನ್ನಪ್ಪನಲ್ಲಿ ಅದೆಷ್ಟು ಸಹನೆ ತುಂಬಿರುವೆ ನೀನು. ಎಷ್ಟೋ ಬಾರಿ ಊಟ ಮಾಡಿಸುವಾಗ ಬೇಡವೆಂದು ಉಗಿದದ್ದಿದೆ, ಕೋಪಗೊಂಡು ಅಪ್ಪನನ್ನು ಹೊಡೆದದ್ದಿದೆ, ಹಠ ಮಾಡಿದ್ದಿದೆ.. ಆದರೂ ನನ್ನೆಲ್ಲ ಚೇಷ್ಟೆಗಳನ್ನು ನಗು ನಗುತ್ತಲೇ ಸಹಿಸುವ ಅಪ್ಪನಿಗೇಕೆ ನನ್ನ ಮೇಲೆ ಇಂತಹ ಪ್ರೀತಿ. ಅಪ್ಪನ ಜೀವನ ನನ್ನಿಂದ ಹಾಳಾಗುತ್ತಿರುವುದು ನನಗೂ ಇಷ್ಟವಿಲ್ಲ.. ಅಪ್ಪ ಮತ್ತೊಂದು ಮದುವೆಯಾಗಿ ಸುಖವಾಗಿರುವುದನ್ನು ನಾನೂ ಕೂಡ ಬಯಸುವೆ. ಆದರೆ ಬರುವ ಹೊಸ ಅಮ್ಮ ನನಗೆ ಅಮ್ಮನಾಗುವಳೇ??

ಮೊನ್ನೆ ರಾಜಾರಾವ್ ಅಂಕಲ್ ಫೋಟೋ ಜಾತಕದೊಂದಿಗೆ ಮನೆಗೆ ಬಂದವರು ಮತ್ತೆ ಅಪ್ಪನಲ್ಲಿ ಮದುವೆಯ ಪ್ರಸ್ತಾಪ ಮಾಡಿದ್ದರು. "ಹುಡುಗಿ ಚನ್ನಾಗಿದ್ದಾಳೆ, ನಿನಗೆ ಒಳ್ಳೆಯ ಜೋಡಿ ದಯವಿಟ್ಟು ಒಪ್ಪಿಕೊ ಮಗನೇ.." ಎಂದು ಅಜ್ಜಿ ಕೂಡ ದನಿ ಸೇರಿಸಿ ಅಪ್ಪನನ್ನು ಒತ್ತಾಯಿಸಿದ್ದರು. ಆದರೆ ಅಪ್ಪ ಒಂದೇ ಮಾತು ಹೇಳಿದ್ದರು.."ನೋಡಿ, ಬರುವ ಹೆಣ್ಣು ನನಗೆ ಹೆಂಡತಿಯಾಗಬಹುದು ಆದರೆ ನನ್ನ ಪಾಪುಗೆ ಅಮ್ಮ ಆಗಲಾರಳು. ಅಲ್ಲದೇ ನನ್ನನ್ನು, ನನ್ನ ಮಗಳನ್ನು ಬೇರೆ ಮಾಡಲಾರಳು ಎಂದೇನು ಭರವಸೆ? ದಯವಿಟ್ಟು ಮತ್ತೆ ಮದುವೆಯ ಮಾತು ಬೇಡ.. ನನ್ನ ಮಗಳು ನನಗೆ ದೇವರು ಕೊಟ್ಟ ವರ.. ಪುಣ್ಯವಂತ–ರಿಗಷ್ಟೇ ಇಂತಹ ಮಕ್ಕಳ ಸೇವೆ ಮಾಡುವ ಸೌಭಾಗ್ಯ ಸಿಗುವುದು. ನನ್ನ ಮುದ್ದು ಮಗಳ ಸೇವೆಯಲ್ಲಿ ನನ್ನ ಜೀವನದ ಸಾರ್ಥಕತೆ ಕಾಣುವೆ.. ಇನ್ನೊಮ್ಮೆ ಒತ್ತಾಯಿಸಿದರೆ ನಾನು ನನ್ನ ಪಾಪು ಇಬ್ಬರೂ ಈ ಮನೆಯಲ್ಲಿ ಇರಲಾರೆವು" ಎಂದು ಕಡ್ಡಿ ತುಂಡರಿಸಿದಂತೆ ಹೇಳಿಬಿಟ್ಟಿದ್ದರು. ಅಪ್ಪನ ಮಾತು ಕೇಳಿ ನನ್ನ ಕಣ್ಣಲ್ಲಿ ನನಗರಿಯದೇ ಕಣ್ಣೀರು ಜಾರುತ್ತಿತ್ತು. ನನ್ನ ಕಣ್ಣೀರು ಕಂಡು ಓಡಿ ಬಂದು

"ಅಳಬೇಡ ಪಾಪು ನಿನ್ನನ್ನು ಬಿಟ್ಟು ನಾನೆಲ್ಲಿಗೂ ಹೋಗಲಾರೆ ಕಂದಾ" ಎಂದು ತಬ್ಬಿ ನುಡಿದ ನನ್ನಪ್ಪನ ಬಗ್ಗೆ ಹೆಮ್ಮೆ ಪಡಲೇ? ಅಥವಾ ಅವರ ಬಾಳಿಗೆ ನಾನೇ ಮುಳ್ಳಾಗಿದ್ದಕ್ಕೆ ದುಃಖ ಪಡಲೇ..?



ಆಶಾ
ಉಡುಪಿ

---



# ಕಾರ್ಮಿಕರ ಮಕ್ಕಳು ಉನ್ನತ ಶಿಕ್ಷಣ ಪಡೆಯಬೇಕು :ಸಚಿವ ಸವದಿ

■ ಉದಯರಶ್ಮಿ ದಿನಪತ್ರಿಕೆ

ಅಥಣಿ: ಕಾರ್ಮಿಕ ಇಲಾಖೆ ಹಾಗೂ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ವತಿಯಿಂದ 2026–27ನೇ ಸಾಲಿನಡಿ ಮಂಜೂರಾದ 1,118 ಕಟ್ಟಡ ಕಾರ್ಮಿಕರಿಗೆ ಸುರಕ್ಷತಾ ಕಿಟ್‌ಗಳನ್ನು ಮಾಜಿ ಉಪ ಮುಖ್ಯಮಂತ್ರಿ, ಅಥಣಿ ಶಾಸಕ ಲಕ್ಷ್ಮಣ ಸವದಿ ಅವರು ಪಟ್ಟಣದ ನಿರೀಕ್ಷಣಾ ಮಂದಿರ ಆವರಣದಲ್ಲಿ ವಿತರಿಸಿದರು.

ವಿವಿಧ ವೃತ್ತಿಯ ಕಾರ್ಮಿಕರಿಗೆ ವೃತ್ತಿಗೆ ಅನುಗುಣವಾಗಿ ಕಿಟ್ ವಿತರಿಸಲಾಯಿತು. ಇದರಲ್ಲಿ ಎಲೆಕ್ಟ್ರಿಷಿಯನ್ 167, ಪ್ಲಂಬರ್ 75, ಕಾರ್ಪೆಂಟರ್ 98, ಮೇಸನ್ 600, ವೆಲ್ಡರ್ 98 ಹಾಗೂ ಪೇಂಟರ್ 80 ಸೇ–ರಿದಂತೆ ಒಟ್ಟು 1,118 ಕಾರ್ಮಿಕರು ಸೌಲಭ್ಯ ಪಡೆದರು. ಬಳಿಕ ಮಾತನಾಡಿದ ಸಚಿವ ಲಕ್ಷ್ಮಣ ಸವದಿ, ಅವರು ಕಟ್ಟಡ ನಿರ್ಮಾಣ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಕಾರ್ಮಿಕರು ಜೀವದ ಹಂಗು ತೊರೆದು ದುಡಿಯುತ್ತಿದ್ದಾರೆ. ಅವರ ಸುರಕ್ಷತೆ ಮತ್ತು ಕಲ್ಯಾಣಕ್ಕೆ ನಮ್ಮ ಸರ್ಕಾರ ಹೆಚ್ಚಿನ ಆದ್ಯತೆ ನೀಡುತ್ತಿದೆ. ಕೆಲಸದ ಸ್ಥಳದಲ್ಲಿ ಅಪಘಾತ ತಡೆಗಟ್ಟಲು ಸುರಕ್ಷತಾ ಪರಿಕರಗಳ ಬಳಕೆ ಕಡ್ಡಾಯ. ಅರ್ಹ ಫಲಾನುಭವಿಗಳಿಗೆ ಸರ್ಕಾರದ ಎಲ್ಲ ಯೋಜನೆಗಳು ತಲುಪುವಂತೆ ಮಾಡಲಾಗುವುದು ಎಂದರು.

"ಕಾರ್ಮಿಕರ ಮಕ್ಕಳು ತಂದೆಯಂತೆ ಕಾರ್ಮಿಕರಾಗಿ ಉಳಿಯಬಾರದು. ಅವರು ಉತ್ತಮ ಶಿಕ್ಷಣ ಪಡೆದು ಉನ್ನತ ಹುದ್ದೆ ಅಲಂಕರಿಸಬೇಕು ಎಂಬುದು ನಮ್ಮ ಆಶಯ. ಅದಕ್ಕಾಗಿಯೇ ಸತ್ತಿ ರಸ್ತೆಯಲ್ಲಿ ಕಾರ್ಮಿಕರ ಮಕ್ಕಳಿಗಾಗಿ ವಸತಿ ಶಾಲೆ ನಿರ್ಮಾಣಕ್ಕೆ ಈಗಾಗಲೇ ಭೂಮಿ ಪೂಜೆ ನೆರವೇರಿಸಲಾಗಿದೆ. ಕಟ್ಟಡ ಕಾಮಗಾರಿ ಪೂರ್ಣಗೊಂಡ ಕೂಡಲೇ ಇಲಾಖೆಗೆ ಹಸ್ತಾಂತರಿಸಲಾಗುವುದು" ಎಂದು ಅವರು ತಿಳಿಸಿದರು.

ಕಾರ್ಮಿಕರ ಮಕ್ಕಳ ಶಿಕ್ಷಣ, ಆರೋಗ್ಯ, ವಸತಿ ಮತ್ತು ಸಾಮಾಜಿಕ ಭದ್ರತೆಗಾಗಿ ಕಲ್ಯಾಣ ಮಂಡಳಿಯು ಹಲವು ಯೋಜನೆಗಳನ್ನು ಜಾರಿಗೊಳಿಸಿದ್ದು, ಅರ್ಹರು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಅವರು ಕರೆ ನೀಡಿದರು. ಈ ವೇಳೆ ತಾಲೂಕು ಕಾರ್ಮಿಕ ಇಲಾಖೆ ಅಧಿಕಾರಿ ಭುವನೇಶ್ವರಿ ಧಾಲೆ, ಸಚಿನ್, ಕಾರ್ಮಿಕ ಇಲಾಖೆ ಸಿಬ್ಬಂದಿ, ಕಾರ್ಮಿಕ ಮುಖಂಡರು ಮತ್ತು ನೂರಾರು ಕಾರ್ಮಿಕರು ಉಪಸ್ಥಿತರಿದ್ದರು.

---

### ಬಣ್ಣ ಬಣ್ಣದ ಬೆಳಕಿನಲ್ಲಿ ಝುಗಮಗಿಸಲಿವೆ ವಿಧಾನಸೌಧ, ಮೈಸೂರು ಅರಮನೆ ಸೇರಿ ರಾಜ್ಯದ ಪಾರಂಪರಿಕ ಕಟ್ಟಡಗಳು!

# ಡಿಕೆ ಶಿವಕುಮಾರ್ ಸರ್ಕಾರಕ್ಕೆ ಶತದಿನಗಳ ಸಂಭ್ರಮ

■ ಉದಯರಶ್ಮಿ ದಿನಪತ್ರಿಕೆ

ಬೆಂಗಳೂರು: ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದ ಸರ್ಕಾರಕ್ಕೆ ಸೆ.10ಕ್ಕೆ ನೂರು ದಿನಗಳ ಸಂಭ್ರಮ.

ಈ ಹಿನ್ನೆಲೆಯಲ್ಲಿ ವಿಧಾನಸೌಧ, ಮೈಸೂರು ಅರಮನೆ, ಕೃಷ್ಣರಾಜಸಾಗರ ಆಣೆಕಟ್ಟು, ತುಂಗಭದ್ರಾ ಜಲಾಶಯ, ಆಲಮಟ್ಟಿ ಜಲಾಶಯ ಸೇರಿದಂತೆ ರಾಜ್ಯದ ಹನ್ನೊಂದು ಪ್ರಮುಖ ಪಾರಂಪರಿಕ ಕಟ್ಟಡಗಳಿಗೆ ಸೆ.10 ರಿಂದ ನಾಲ್ಕು ದಿನಗಳ ಕಾಲ ವರ್ಣರಂಜಿತ ವಿದ್ಯುತ್ ದೀಪಾಲಂಕಾರವನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಆಯೋಜಿಸಲಾಗುತ್ತಿದೆ. ಬೆಂಗಳೂರಿನ ಪುರಭವನ, ಕೆ.ಆರ್.ಪುರಂ ತೂಗುಸೇತುವೆ, ಮೈಸೂರು ಅರಮನೆ ಹಾಗೂ ಜಯಮಾರ್ತಾಂಡ ಮಹಾದ್ವಾರ, ಐತಿಹಾಸಿಕ ಹಂಪಿಯ ವಿಶ್ವವಿಖ್ಯಾತ ವಿರೂಪಾಕ್ಷೇಶ್ವರ ದೇವಾಲಯದ ಬಿಷ್ಟಪ್ಪಯ್ಯನ ಗೋಪುರ, ಕಲಬುರ್ಗಿಯ ಜಿಲ್ಲಾಧಿಕಾರಿ ಕಚೇರಿ, ಜಗತ್ ಸರ್ಕಲ್ ಸೇ–ರಿದಂತೆ ಪ್ರಮುಖ ಸ್ಥಳಗಳು ವಿದ್ಯುತ್ ದೀಪಾಲಂಕಾರದಿಂದ



ಕಂಗೊಳಿಸಲಿವೆ. ಸರ್ಕಾರದ ಅಭಿವೃದ್ಧಿ ಯೋಜನೆ ಮತ್ತು ಪಂಚ ಗ್ಯಾರಂಟಿ ಯೋಜನೆಗಳ ಯಶೋಗಾಥೆಯನ್ನು ಬಿಂಬಿಸುವ ಮನಮೋಹಕ ಎಲ್ಇಡಿ ಪ್ರದರ್ಶನಗಳು ,ಧ್ವನಿ ಮತ್ತು ಬೆಳಕು ,ತ್ರಿ ಡಿ ಮ್ಯಾಪಿಂಗ್ ಪ್ರದರ್ಶನಗಳ ಆಯ್ದ ಕಟ್ಟಡಗಳ ಮೇಲೆ ಬಿತ್ತರಗೊಳ್ಳಲಿವೆ.

ರಾಜ್ಯದ ವಿವಿಧ ಜಿಲ್ಲೆಗಳ ಜಿಲ್ಲಾಡಳಿತ ವತಿಯಿಂದಲೂ ದೀಪಾಲಂಕಾರ ವ್ಯವಸ್ಥೆ ಮಾಡಲಾಗುತ್ತಿದೆ. ಮುಖ್ಯಮಂತ್ರಿಯಾಗಿ ಡಿ.ಕೆ.ಶಿವಕುಮಾರ್ ಅವರು ಅಧಿಕಾರಕ್ಕೇರಿ ನೂರು ದಿನಗಳ ಈ ಅವಧಿಯಲ್ಲಿ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್, ಸಾರ್ವಜನಿಕರ ಕುಂದು ಕೊರತೆ , ಅಹವಾಲು ಆಲಿಸಿ, ಪರಿಹ–ರಿಸಲು "ಪ್ರಜಾಸೇವಾ" ಇಲಾಖೆ ಸ್ಥಾಪನೆ, ಗ್ಯಾರಂಟಿ ಯೋಜನೆಗಳಡಿ ಸೋರಿಕೆ ತಡೆಗೆ ಕಟ್ಟುನಿಟ್ಟಿನ ಕ್ರಮ, ರೌಡಿಗಳ ನಿಗ್ರಹಕ್ಕೆ ಜಿಲ್ಲೆಗೊಂದು ಪಡೆ ರಚನೆ, ಕೇಂದ್ರದ ನೀತಿ ಆಯೋಗದ ಸಭೆಯಲ್ಲಿ ಕರ್ನಾಟಕದ ಬೇಡಿಗಳ ಪ್ರಬಲ ಮಂಡನೆ, ನೂತನ ಸಿಎಸ್ಆರ್ ನೀತಿ ಕ್ರಮ, ಬರಪ–ರಿಸ್ಥಿತಿ ನಿರ್ವಹಣೆಗೆ ವಿಭಾಗವಾರು ಪರಿಶೀಲನೆ ನಡೆಸಿ ಅಗತ್ಯ ಸಿದ್ಧತೆ ಕರಾವಳಿ ಪ್ರವಾಸೋದ್ಯಮ ಉತ್ತೇಜನಕ್ಕೆ ವಿಶೇಷ ಒತ್ತು, ಕೊಪ್ಪಳ, ರಾಯಚೂರು, ವಿಜಯನಗರ ,ಬಳ್ಳಾರಿ ಹಾಗೂ ನೆರೆಯ ಆಂಧ್ರಪ್ರದೇಶ, ತೆಲಂಗಾಣ ರಾಜ್ಯಗಳ ರೈತರ ಜೀವನಾಡಿಯಾಗಿರುವ ಹೊಸಪೇಟೆ ಸಮೀಪದ ತುಂಗಭದ್ರಾ ಜಲಾಶಯಕ್ಕೆ ಹೊಸ ಸ್ಪಿಲ್ ವೇ ಗೇಟುಗಳ ಉದ್ಘಾಟನೆ, ಬಿಯಾಂಡ್ ಬೆಂಗಳೂರು ಪರಿಕಲ್ಪನೆಯಡಿ ಎರಡು ಮತ್ತು ಮೂರನೇ ಹಂತದ ನಗರಗಳಲ್ಲಿ ಕೈಗಾ–ರಿಕೆಗಳ ಸ್ಥಾಪನೆಗೆ ಒತ್ತು ,72 ಸಾವಿರ ಸರ್ಕಾರಿ ಹುದ್ದೆಗಳ ನೇಮಕಾತಿಗೆ ಕ್ರಮ ಸೇರಿದಂತೆ ಅನೇಕ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಿದ್ದಾರೆ.

ಮುಖ್ಯಮಂತ್ರಿಗಳು ಮುಂಬರುವ ದಿನಗಳಲ್ಲಿ ದೃಢ ಕರ್ನಾಟಕದ ಸಂಕಲ್ಪಕ್ಕೆ ಮಹತ್ವದ ಹೆಜ್ಜೆಗಳನ್ನು ಇಡಲು ಆಲೋಚಿಸಿದ್ದಾರೆ ಎಂದು ವಾರ್ತಾ ಇಲಾಖೆಯ ಆಯುಕ್ತರಾದ ಎಂ.ಎನ್.ಅನುಚೇತ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

---

# ಒಂದೇ ರಾತ್ರಿ ಮೂರು ಪಂಪ್‌ಸೆಟ್ ಕಳವು!

### ಕೊಲ್ಹಾರದ ಜಮೀನುಗಳಲ್ಲಿ ಕಳ್ಳರ ಕೈಚಳಕ । ರೈತರಲ್ಲಿ ಆತಂಕ । ಶೀಘ್ರ ಪತ್ತೆಗೆ ಸಾರ್ವಜನಿಕರ ಒತ್ತಾಯ

■ ಉದಯರಶ್ಮಿ ದಿನಪತ್ರಿಕೆ

ಕೊಲ್ಹಾರ: ಪಟ್ಟಣದ ಪೌಜಿ ದಾಬಾ (ಸೈನಿಕ ವೃತ್ತ) ಸಮೀಪದ ಜಮೀನುಗಳಲ್ಲಿ ಅಳವಡಿಸಲಾಗಿದ್ದ ಮೂರು ವಿದ್ಯುತ್ ಮೋಟಾರ್ ಪಂಪ್‌ಸೆಟ್‌ಗಳನ್ನು ಕಳ್ಳರು ಒಂದೇ ರಾತ್ರಿಬಿಚ್ಚಿಕೊಂಡು ಪರಾರಿಯಾಗಿರುವ ಘಟನೆ ರೈತರಲ್ಲಿ ಆತಂಕ ಮೂಡಿಸಿದೆ.

ಸೆ. 5ರ ಶನಿವಾರ ರಾತ್ರಿ ಕಳ್ಳರು ಈ ಕೃತ್ಯ ಎಸಗಿದ್ದಾರೆ ಎನ್ನಲಾಗಿದೆ. ಗುರುಲಿಂಗಪ್ಪ ಸಂಗಪ್ಪ ಗಣಿಯವರ ಜಮೀನಿನಲ್ಲಿದ್ದ 5 ಎಚ್‌ಪಿ ಸಾಮರ್ಥ–್ಯದ ಪಂಪ್‌ಸೆಟ್, ಅಶೋಕ ಸಂಗಪ್ಪ ಹುದ್ದಾರ ಅವರ ಜಮೀನಿನಲ್ಲಿದ್ದ 5 ಎಚ್‌ಪಿ ಪಂಪ್‌ಸೆಟ್ ಹಾಗೂ ಬಸವರಾಜ ಸಿದ್ದಪ್ಪ ಹುದ್ದಾರ ಅವರ ಜಮೀನಿನಲ್ಲಿದ್ದ ಜಕ್ಕಪ್ಪ ಕೊಂತಿಕಲ್ಲ ಅವರಿಗೆ ಸೇರಿದ 10 ಎಚ್‌ಪಿ ಸಾಮರ್ಥ್ಯದ ಪಂಪ್‌ಸೆಟ್ ಮೋಟಾರ್‌ಗಳನ್ನು ಕಳ್ಳರು ಬಿಚ್ಚಿಕೊಂಡು ಕೊಂಡೊಯ್ದಿದ್ದಾರೆ. ರವಿವಾರ ಬೆಳಿಗ್ಗೆ ವಾಡಿಕೆಯಂತೆ ಜಮೀನುಗಳಿಗೆ ತೆರಳಿದ ರೈತರು ಪಂಪ್‌ಸೆಟ್‌ಗಳು ಕಾಣೆಯಾಗಿರುವುದನ್ನು ಗಮನಿಸಿದ್ದಾರೆ. ಮೋಟಾರ್‌ಗಳನ್ನು ಬಿಚ್ಚಿಕೊಂಡು ಕಳ್ಳರು ಪರಾರಿಯಾಗಿರುವುದು ಗೊತ್ತಾಗಿದೆ. ತಕ್ಷಣ ಜಮೀನು ಮಾಲೀಕರು ಕೊಲ್ಹಾರ ಪೊಲೀಸ್ ಠಾಣೆಗೆ ತೆರಳಿ ಪಿಎಸ್ಐ ಅಶೋಕ ನಾಯಕ ಅವರಿಗೆ ದೂರು ನೀಡಿ ಘಟನೆ ಕುರಿತು ಮಾಹಿತಿ ನೀಡಿದ್ದಾರೆ.

**ಸಾಲು ಸಾಲು ಕಳವು**

**ಒಂದೇ ರಾತ್ರಿ ಅಕ್ಕಪಕ್ಕದ ಮೂರು ಜಮೀನುಗಳಲ್ಲಿ ಪಂಪ್‌ಸೆಟ್‌ಗಳೇ ಕಳವಾಗಿರುವುದು ಹಲವು ಅನುಮಾನಗಳಿಗೆ ಕಾರಣವಾಗಿದೆ. ಕೃಷಿ ಚಟುವಟಿ–ಕೆಗಳಿಗೆ ಪ್ರಮುಖವಾಗಿರುವ ದುಬಾರಿ ಮೋಟಾರ್‌ಗಳನ್ನು ಕಳೆದುಕೊಂಡಿರುವ ರೈತರು ಕಂಗಾಲಾಗಿದ್ದಾರೆ. ಘಟನೆಯನ್ನು ಗಂಭೀರವಾಗಿ ಪರಿಗಣಿಸಿ ಪೊಲೀಸರು ತನಿಖೆ ಚುರುಕುಗೊಳಿಸಿ ಕಳ್ಳರನ್ನು ಶೀಘ್ರ ಪತ್ತೆಹಚ್ಚಬೇಕು. ಕಳವಾಗಿರುವ ಪಂಪ್‌ಸೆಟ್‌ಗಳನ್ನು ಮರಳಿ ಕೊಡಿಸುವ ಮೂಲಕ ರೈತರಿಗೆ ನ್ಯಾಯ ಒದಗಿಸಬೇಕು ಎಂದು ರೈತರು ಒತ್ತಾಯಿಸಿದ್ದಾರೆ.**

---

### ಬರಡೋಲ ಗ್ರಾಮದಲ್ಲಿ ವಿಠ್ಠಲ ರುಕ್ಮಿಣಿ & ಹನುಮಾನ ದೇವರ ಶಿಖರ ಕಳಸಾರೋಹಣ । ಅಭಿನವ ಮುರುಗೇಂದ್ರ ಶ್ರೀ ಅಭಿಮತ

# ಭಗವಂತನು ಪ್ರಕೃತಿಯ ಕಣ ಕಣದಲ್ಲೂ ಅಡಗಿದ್ದಾನೆ

■ ಉದಯರಶ್ಮಿ ದಿನಪತ್ರಿಕೆ

■ ವರದಿ: ಮಲಿಕ್ ಎಲ್.ಜಮಾದಾರ

ಚಡಚಣ: ದೇವಸ್ಥಾನಗಳು ಕಟ್ಟಿಸಿ ಮೂರ್ತಿಯನ್ನು ಪ್ರತಿಷ್ಠಾಪಿಸಿ ಕೇವಲ ಶಿಖರ ಕಳಸಾರೋಹಣ ಮಾಡುವುದಲ್ಲ ಬದಲಿಗೆ ಅಲ್ಲಿನ ಪವಿತ್ರ ಸ್ಥಳದಲ್ಲಿ ಸತ್ಸಂಗ ಮತ್ತು ಭಕ್ತಿಮಾರ್ಗ, ಭಜನ ಸಂಲ್ಪದ ಸಂಕೇತವನ್ನು ಜೀವಂತಗೊಳಿಸುವುದಾಗಿದೆ ಎಂದು ಶಿರಶ್ಯಾಡದ ಅಭಿನವ ಮುರುಗೇಂದ್ರ ಮಹಾಸ್ವಾಮಿಗಳು ಹೇಳಿದರು.

ಸಮೀಪದ ಬರಡೋಲ ಗ್ರಾಮ ವಿಠ್ಠಲ ನಗರದಲ್ಲಿ ಸೆ.08 ರಂದು ಆಯೋಜಿಸಲಾದ ವಿಠ್ಠಲ ರುಕ್ಮಿಣಿ ಮತ್ತು ಹಾಗೂ ಹನುಮಾನ ದೇವರ ಶಿಖರ ಕಳಸಾರೋಹಣ ಹಾಗೂ ಧರ್ಮಸಭೆ ಕಾರ್ಯಕ್ರಮದಲ್ಲಿ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದ ಅವರು, ವಿಠ್ಠಲ ರುಕ್ಮಿಣಿ ಹಾಗೂ ಹನುಮಾನ ದೇವರ ಬೃಹತ್ ಶಿಖರವಾಗಬೇಕೆಂಬ ಎಲ್ಲರ ಮಹಾದಾಸೆ ಇಂದು ಸಾಕಾರಗೊಂಡಿದೆ ಇದಕ್ಕೆ ಕಾರಣ ನಿಮ್ಮಲ್ಲಿರುವ ಅಚಲ ಭಕ್ತಿ,ನಾಮಸ್ಮರಣೆ ನಿಮ್ಮ ಪರಿಶ್ರಮ ಮತ್ತು ನಿಮ್ಮ ನಿರಂತರ ಪ್ರಯತ್ನ.ವಿಠ್ಠಲ ನಗರವು ಮೊದಲ ದೊಡ್ಡಿ ಎಂದು ಕರೆಯಲಾಗುತ್ತಿತ್ತು ಆದರೆ ಇಂದು ಸದಾ ವಿಠ್ಠಲನ ಧ್ಯಾನ ವಿವಿಧ ಸತ್ಸಂಗ, ಭಜನೆಯಂತಹ ಕಾರ್ಯಕ್ರಮಗಳಿಂದ ಪ್ರಸಿದ್ಧಿ ಪಡೆದು ಕೊಂಪಿಯಾಗಿದ್ದನ್ನು ಹಂಪಿಯಾಗಿ



ಮಾರ್ಪಟ್ಟಿದೆ. ಎಂದರು.

ಇದೆಲ್ಲದ್ದಕ್ಕೂ ಕಾರಣೀಭೂತ ಭಗವಂತ ಅವನು ಪ್ರಕೃತಿಯ ಕಣಕಣದಲಿದ್ದಾನೆ ಇಂತಹ ದೇವಸ್ಥಾನಗಳ ಮೂಲಕ ನಿರಂತರ ನಾಮಸ್ಮರಣೆ

"ವಿಠ್ಠಲ ರುಕ್ಮಿಣಿ ಹಾಗೂ ಹನುಮಾನ ದೇವರ ಶಿಖರ ಕಳಸಾರೋಹಣ ಬಹು ದಿನಗಳ ಕನಸು ಇಂದು ಈಡೇರಿದಂತಾಗಿದೆ. ಆ ನಿಟ್ಟಿನಲ್ಲಿ ಎಲ್ಲ ಬೇಡಿಗೆ ಈಡೇ–ರಿದಂತಾಗಿದೆ. ಅದಕ್ಕೆ ಕಾರಣ ಇಲ್ಲಿನ ಅಚಲ ಭಕ್ತಿ, ನಿರಂತರ ನಾಮಸ್ಮರಣೆ, ಇದೇ ರೀತಿ ಇಲ್ಲಿ ಭಕ್ತಿಭಾವ ಎಂದಿಗೂ ಹಸಿರಾಗಿರಲಿ ಎಂದು ಆಶಿಸುವೆ."



■ ಡಿ.ಎನ್.ಭೋಸಲೆ

ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವ ಎಂ.ಬಿ ಪಾಟೀಲರ ಆಪ್ತ ಕಾರ್ಯದರ್ಶಿ

ಮೂಲಕ ಭಗವಂತನನ್ನು ಕಾಣಲು ಸಾಧ್ಯ ಆದ್ದ–ರಿಂದ ಇಲ್ಲಿ ನಿರಂತರವಾಗಿ ಭಕ್ತಿ,ಸತ್ಸಂಗ,ಪ್ರವಚನ ಶ್ರದ್ಧಾ ಭಕ್ತಿಯಿಂದ ಕಾರ್ಯಕ್ರಮದಲ್ಲಿ ಭಾಗವಹಿಸಿ ಈ ಪವಿತ್ರ ಮಾನವ ಜನ್ಮದಲ್ಲಿ ನಿಸ್ವಾರ್ಥತೆಯಿಂದ ಸತ್ಕಾರ್ಯಗಳನ್ನ ಮಾಡುತ್ತ ಜೀವನವನ್ನು ಪಾವನಗೊಳಿಸಿಕೊಳ್ಳಬೇಕೆಂದು ಹೇಳಿದರು.

ಈ ಸಂದರ್ಭದಲ್ಲಿ ಪಂಢರಪೂರದ ಹ.ಭ.ಪ. ಅಂಬಾದಾಸ ಕರಂಡೆ ಮಹಾರಾಜರು ಮಾತನಾಡಿ, 50 ವರ್ಷಗಳ ಸುದೀರ್ಘ ಇತಿಹಾಸ ಇರುವ ಹನುಮಾನ ಮಂದಿರಕ್ಕೆ ನೂತನ ಶಿಖರ ಕಳಸಾರೋಹಣಕ್ಕೆ ಕಾರ್ಯಕ್ರಮಕ್ಕೆ ಡಿ.



ಎನ.ಭೋಸಲೆ ಅವರ ಕೊಡಗೆ ಅಪಾರವಾದ್ದು ಅದರಂತೆ ಈ ಪವಿತ್ರ ಸ್ಥಳದಲ್ಲಿ ನಿತ್ಯ, ಭಕ್ತಿ ಪ್ರವಚನ ,ಭಜನೆ ನಾಮಸ್ಮರಣೆ ನಿರಂತರವಾಗಿರಲಿ ಎಂದು ಹೇಳಿದರು.

ನಾಗಠಾಣ ಮತಕ್ಷೇತ್ರದ ಶಾಸಕ ವಿಠ್ಠಲ ಕಡಕಧೋಂಡ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಈ ವೇಳೆಯಲ್ಲಿ ಕುಂಬ ಕಳಸ ಸುಮಂಗಲೆಯರ ಆರತಿಯೊಂದೊಗೆ ಭವ್ಯ ವೈಭವ ಮೆರವಣಿಗೆ ಮೂಲಕ ಕಳಸವನ್ನು ವಿಠ್ಠಲ ರುಕ್ಮಿಣಿ ಹಾಗೂ ಹನುಮಾನ ದೇವಸ್ಥಾನಕ್ಕೆ ತರಲಾಯಿತು.

ಈ ಸಂದರ್ಭದಲ್ಲಿ ಅಮೃತಾನಂದ ಮಹಾಸ್ವಾಮಿಗಳು, ಗುರು ಗುರುಪಾದೇಶ್ವರ ಶಿವಾಚಾರ್ಯರು, ಜ್ಯೋತಿಪ್ರಕಾಶ ಮಹಾಸಿದ್ಧಯೋಗಿಗಳು ಆನಂದ, ಮಹಾಂತೇಶ ಸ್ವಾಮಿಗಳು ತದ್ದೇವಾಡಿ, ವಿಶ್ವನಾಥ ಸ್ವಾಮಿಗಳು, ಕಮಲಾಕರ ಗುರೂಜಿ, ಮಾಜಿ ಜಿ.ಪಂ.ಉಪಾಧ್ಯಕ್ಷ ಶ್ರೀಶೈಲಗೌಡ ಬಿರಾದಾರ ಭೀ.ಸ.ಕಾ.ಮರಗೂರ ನಿರ್ದೇಶಕ ಎಂ.ಆರ್. ಪಾಟೀಲ, ಸಂಜೀವ ಐಹೊಳ್ಳಿ, ಮಾಜಿ ಜಿ.ಪಂ.ಸದಸ್ಯ ಭೀಮು ಸಾಹುಕಾರ ಬಿರಾದಾರ, ನಾಗಣ್ಣಗೌಡ ಸಿ. ಚೌಧರಿ , ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಗಂಗಾಧರ ಸಂಭಣ್ಣಿ, ಮಹೇಂದ್ರಕುಮಾರ, ರಾಜುಗೌಡ ಝುಳಕಿ, ರವಿ ಭೀಸೆ, ನ್ಯಾಯವಾದಿ ಗಜಾನಂದ ಪವಾರ, ಬಾಪುರಾಯ ಬಿರಾದಾರ ಸಂತೋಷ ಪಾಟೀಲ, ತುಕಾರಾಮ ಶಿಂಧೆ, ಪಾಂಡುರಂಗ ಶಿಂಧೆ, ಶಿವಾಜಿ ಶಿಂಧೆ, ವಿಠ್ಠಲ ಕಾರಾಜನಗಿ, ಲಾಲಸಾಬ ಜಮಾದಾರ, ಅಪ್ಪುಗೌಡ ಪಾಟೀಲ, ಚಂದ್ರಕಾಂತ ನಂದಗೊಂಡ ಸೇರಿದಂತೆ ವಿವಿಧ ಗ್ರಾಮದ ಗ್ರಾಮಸ್ಥರು ಉಪಸ್ಥಿತರಿದ್ದರು. ಲಾಲಸಾಬ ಬಡಿಗೇರ ಕಾರ್ಯಕ್ರಮ ನಿರ್ವಹಿಸಿದರು.

# ಹೋಮ-ಹವನ 1ಸಸಿ ನೆಟ್ಟು ಪೋಷಿಸುವ ಕಾರ್ಯಕ್ಕೆ ಸಮಾನ



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಒಬ್ಬ ಮನುಷ್ಯ ತನ್ನ ಜೀವಿತಾವಧಿಯಲ್ಲಿ ಗಳಿಸುವ ಸಂಪತ್ತು, ಆಸ್ತಿ-ಪಾಸ್ತಿಗಿಂತ ಒಂದು ಸಸಿಯನ್ನು ನೆಟ್ಟು ಅದನ್ನು ಪೋಷಿಸುವುದರಿಂದ ದೊರೆಯುವ ಸಂತೋಷ ಮತ್ತು ತೃಪ್ತಿ ಹೆಚ್ಚು ಮಹತ್ವದ್ದಾಗಿದೆ. ಬೆಳೆದ ಮರಗಳನ್ನು ಕಡಿದಾಗ ಜನರು ವ್ಯಕ್ತಪಡಿಸುವ ಆಕ್ರೋಶವು ಹಸಿ-ರೀಕರಣದ ಬಗ್ಗೆ ಜನರಲ್ಲಿ ಮೂಡಿರುವ ಜಾಗೃತಿಗೆ ಸಾಕ್ಷಿಯಾಗಿದೆ ಎಂದು ವಿಜಯಪುರ ಸೈಕ್ಲಿಂಗ್ ಗ್ರುಪ್ ಅಧ್ಯಕ್ಷ ಡಾ. ಮಹಾಂತೇಶ ಬಿರಾದಾರ ಹೇಳಿದರು.

ವಿಜಯಪುರ ಐಶ್ವರ್ಯ ನಗರದ ಉದ್ಯಾನವನದಲ್ಲಿ 75 ಸಸಿಗಳನ್ನು ನೆಡುವ ವನಮಹೋತ್ಸವ ಉದ್ಘಾಟಿಸಿ ಮಾತನಾಡಿದ ಅವರು, ಗಣಪತಿ ಪೆಂಡಾಲ ಹಾಕಲು ಇಲ್ಲಿನ ಮರಗಳನ್ನು ಕಡಿದಿದ್ದರು. ಇದರಿಂದ ಸಾರ್ವಜನಿಕರಲ್ಲಿ ಆಕ್ರೋಶಕ್ಕೆ ಕಾರಣವಾಗಿತ್ತು. ತಾವು ಮಾಡಿದ್ದು ತಪ್ಪು ಎಂದು ತಿಳಿದು ನಾಲ್ಕು ಗಿಡಗಳ ಬದಲಿಗೆ 75 ಗಿಡಗಳನ್ನು ಇಂದು ನೆಟ್ಟು ರಕ್ಷಣೆ ಮಾಡಲು ಮುಂದೆ ಬಂದಿರುವುದು ಎಲ್ಲರಿಗೂ ಸಂತಸ ತಂದಿದೆ ಎಂದರು.

ಐಶ್ವರ್ಯ ನಗರದ ನಿವಾಸಿ ಜಯಪ್ರಕಾಶ ಸೊಡ್ಡಗಿ ಮಾತನಾಡಿ, ಮನೆ-ಮಠಗಳಲ್ಲಿ ಹೋಮ-ಹವನ, ಮಂತ್ರಪಠಣ ಮಾಡುವುದ-ರಿಂದ ದೊರೆಯುವ ಪುಣ್ಯದಂತೆ ಒಂದು ಸಸಿ ನೆಟ್ಟು ಅದನ್ನು ಪೋಷಿಸುವ ಕಾರ್ಯಕ್ಕೆ ಸಮಾನವಾಗಿದೆ ಎಂಬ ಸಂದೇಶ ಅಗ್ನಿಪುರಾಣದಲ್ಲಿ ಕಾಣುತ್ತೇವೆ. ಜನ್ಮದಿನ, ಸಭೆ-ಸಮಾರಂಭಗಳಲ್ಲಿ ದುಂದು ವೆಚ್ಚ ಮಾಡುವ ಬದಲು ಮನೆ-ಮನೆಗಳಲ್ಲಿ, ರಸ್ತೆ ಪಕ್ಕದಲ್ಲಿ, ಉದ್ಯಾನಗಳಲ್ಲಿ ಸಸಿಗಳನ್ನು ನೆಟ್ಟು ಹಸಿರು ವಾತಾವರಣ ಸೃಷ್ಟಿಸಿದರೆ, ತಾಪಮಾನ ಕಡಿಮೆಯಾಗುತ್ತದೆ. ಸುಂದರ ಪರಿಸರವನ್ನೂ ನಿರ್ಮಾಣ ಮಾಡಬಹುದು. ಒಬ್ಬ ವ್ಯಕ್ತಿ ತನ್ನ ಜೀವಿತಾವಧಿಯಲ್ಲಿ ತಿಳಿದು, ತಿಳಿಯದೆ ಮಾಡಿದ ತಪ್ಪುಗಳಿಗೆ ಪ್ರಾಯಶ್ಚಿತ್ತವಾಗಿ ಒಂದು ಸಸಿಯನ್ನು ನೆಟ್ಟು, ಪೋಷಿಸುವುದು ಉತ್ತಮ ಕಾರ್ಯವಾಗಿದೆ ಎಂದು ಹೇಳಿದರು.

ಐಶ್ವರ್ಯ ನಗರ ನಿವಾಸಿ ಬಸವರಾಜ ಕೋರಿ ಸಸಿಗಳಿಗೆ ಡ್ರಿಪ್ ವ್ಯವಸ್ಥೆ ಕಲ್ಪಿಸಿ, ಪೋಷಣೆ ಮಾಡುವುದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ಮಹಾಪೌರ ಮಡಿವಾಳ ಕರಡಿ, ವಿಜಯಪುರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ. ಗಂಗಾಧರ ಸಂಬಣ್ಣಿ, ಭೀಮಶಿ ಬಿರಾದಾರ, ಅರಣ್ಯ ಸಂರಕ್ಷಣಾಧಿಕಾರಿ ಸಂತೋಷಕುಮಾರ ಅಜೂರ, ವಿಸಿಜಿ ಉಪಾಧ್ಯಕ್ಷ ಶಿವನಗೌಡ ಪಾಟೀಲ, ರಾಜ್ಯ ಗುತ್ತಿಗೆದಾರರ ಸಂಘದ ಸಂಘಟನಾ ಕಾರ್ಯದರ್ಶಿ ಹಣಮಂತ ಚಿಂಚಲಿ ಸೇರಿದಂತೆ ಐಶ್ವರ್ಯ ನಗರದ ನಿವಾಸಿಗಳಾದ ಅಶೋಕ ದೇಶಟ್ಟಿ, ಈರಣ್ಣ ಹುಳಸೂರ, ವಿವೇಕ ಹುಂಡೇಕಾರ, ಜಯಪ್ರಕಾಶ ಅಂಬಲಿ, ಎಸ್. ಎಸ್. ತೊದಲಬಾಗಿ, ಗಂಟನೂರ ಮಠ, ಸಿದ್ದು ತೇಜೂರ, ಗಿರೀಶ ಅಮತೆಪ್ಪ, ಎಂ.ಎಸ್. ಬಿರಾದಾರ ಹಾಗೂ ವಿಜಯಪುರ ಸೈಕ್ಲಿಂಗ್ ಗ್ರೂಪ್‌ನ ಸದಸ್ಯರು ಉಪಸ್ಥಿತರಿದ್ದರು.

# ಜನಪದ ಕಲೆ ನಮ್ಮ ಇತಿಹಾಸದ ಜೀವಂತ ದಾಖಲೆ : ಚನ್ನವೀರ ಶ್ರೀ

■ ಉದಯರಶ್ಮಿ ದಿನಪತ್ರಿಕೆ




ಮುದ್ದೇಬಿಹಾಳ: ಜನಪದ ಕಲೆ, ಸಾಹಿತ್ಯ, ಸಂಗೀತ ಹಾಗೂ ಸಂಪ್ರದಾಯಗಳು ನಮ್ಮ ನಾಡಿನ ಸಂಸ್ಕೃತಿಯ ಜೀವಂತ ಪ್ರತೀಕಗಳಾಗಿವೆ. ಆಧುನಿಕತೆಯ ಭರಾಟೆಯಲ್ಲಿ ಅವು ಮರೆಯಾಗದಂತೆ ಸಂರಕ್ಷಿಸಿ, ಮುಂದಿನ ಪೀಳಿಗೆಗೆ ಪರಿಚಯಿಸುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ ಎಂದು ಕುಂಟೋಜಿ ಸಂಸ್ಥಾನ ಹಿರೇಮಠದ ಡಾ.ಚನ್ನವೀರ ಶಿವಾಚಾರ್ಯರು ನುಡಿದರು.

ತಾಲೂಕಿನ ಕುಂಟೋಜಿ ಗ್ರಾಮದ ಆರಾಧ್ಯ ದೈವ ಬಸವೇಶ್ವರ ಜಾತ್ರಾ ಮಹೋತ್ಸವದಲ್ಲಿ ಕರ್ನಾಟಕ ಜಾನಪದ ಪರಿಷತ್ತಿನ ತಾಲೂಕು ಘಟಕದ ವತಿಯಿಂದ ಜಾತ್ರಾ ಕಮೀಟಿಯ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ ವಿಶ್ವ ಜಾನಪದ ದಿನಾಚರಣೆ ಕಾರ್ಯಕ್ರಮದಲ್ಲಿ ದಿವ್ಯ ಸಾನಿಧ್ಯ ವಹಿಸಿ, ಕಾರ್ಯಕ್ರಮವನ್ನೂ ಉದ್ಘಾಟಿಸಿ ಅವರು ಆಶೀರ್ವಚನ ನೀಡಿದರು.

ಜನಪದವೆಂದರೆ ಕೇವಲ ಹಾಡು, ನೃತ್ಯ ಅಥ-ವಾ ಮನರಂಜನೆಯಲ್ಲ. ಗ್ರಾಮೀಣ ಜನರ ಬದುಕು, ನೋವು-ನಲಿವು, ದುಡಿಮೆ, ನಂಬಿಕೆ, ಆಚರಣೆ, ಜೀವನಾನುಭವ ಹಾಗೂ ಸಾಮಾಜಿಕ ಮೌಲ್ಯಗಳ ಸಮಗ್ರ ಅಭಿವ್ಯಕ್ತಿಯಾಗಿದೆ. ನಮ್ಮ ಪೂರ್ವಜರು ಅಕ್ಷರಜ್ಞಾನ ಕಡಿಮೆಯಿದ್ದ ಕಾಲದಲ್ಲಿಯೂ ತಮ್ಮ ಅನುಭವ, ಜ್ಞಾನ ಮತ್ತು ಬದುಕಿನ ಪಾಠಗಳನ್ನು ಜನಪದ ಗೀತೆ, ಕಥೆ, ಗಾದೆ, ಲಾವಣಿ, ತತ್ವಪದ, ಡೊಳ್ಳು, ಕೋಲಾಟ ಸೇರಿದಂತೆ ವಿವಿಧ ಕಲಾ ಪ್ರಕಾರಗಳ ಮೂಲಕ ತಲೆಮಾರಿನಿಂದ ತಲೆಮಾರಿಗೆ ಹಸ್ತಾಂತರಿಸಿದ್ದಾರೆ. ಹೀಗಾಗಿ ಜನಪದ ಕಲೆ ನಮ್ಮ ಇತಿಹಾಸದ ಜೀವಂತ ದಾಖಲೆಗಳಾಗಿವೆ. ಇಂದಿನ ಯುವ ಪೀಳಿಗೆ ಆಧುನಿಕ ಸಂಸ್ಕೃತಿಯತ್ತ ಆಕರ್ಷಿತವಾಗುತ್ತಿರುವ ಸಂದರ್ಭದಲ್ಲಿ, ತಮ್ಮ ನೆಲದ ಭಾಷೆ, ಕಲೆ, ಸಂಪ್ರದಾಯ ಮತ್ತು ಸಂಸ್ಕೃತಿಯ ಬಗ್ಗೆ ಹೆಮ್ಮೆ ಬೆಳೆಸಿಕೊಳ್ಳಬೇಕು. ಗ್ರಾಮೀಣ ಕಲಾವಿದರಿಗೆ ಪ್ರೋತ್ಸಾಹ, ಗೌರವ ಮತ್ತು ಸೂಕ್ತ ವೇದಿಕೆ ದೊರೆತಾಗ ಮಾತ್ರ ಜನಪದ ಪರಂಪರೆ ಉಳಿಯಲು ಸಾಧ್ಯ ಎಂದರು.

ಪರಿಷತ್ತಿನ ತಾಲೂಕು ಅಧ್ಯಕ್ಷ ಎ.ಆರ್.ಮುಲ್ಲಾ ಮಾತನಾಡಿ, ಜನಪದ ಕಲೆಗಳಿಗೆ ಹೆಚ್ಚಿನ ಪ್ರೋತ್ಸಾಹ ನೀಡಬೇಕು. ಕಲಾವಿದರನ್ನು ಉಳಿಸಿದರೆ ಕಲೆ ಉಳಿಯುತ್ತದೆ. ಕಲೆ ಉಳಿದರೆ ನಮ್ಮ ಸಂಸ್ಕೃತಿ ಉಳಿಯುತ್ತದೆ. ಆದ-ರಿಂದ ಜನಪದ ಕಲಾವಿದರಿಗೆ ಗೌರವದ ಜೊತೆಗೆ ಬದುಕಿಗೆ ಅಗತ್ಯವಾದ ಪ್ರೋತ್ಸಾಹ ಮತ್ತು ಅವಕಾಶಗಳನ್ನು ಕಲ್ಪಿಸುವುದು ಸರ್ಕಾರ ಹಾಗೂ ಸಮಾಜದ ಜವಾಬ್ದಾ-ರಿಯಾಗಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ದೇವಸ್ಥಾನ ಕಮೀಟಿಯ ಅಧ್ಯಕ್ಷ ಹುರುಲಿಂಗಪ್ಪ ಸುಲ್ಲಳ್ಳಿ ಮಾತನಾಡಿ, ಯಾವುದೇ ನಿರೀಕ್ಷೆಯಿಲ್ಲದೆ ತಲೆಮಾರುಗಳಿಂದ ತಮ್ಮ ಕಲೆ ಮತ್ತು ಪರಂಪರೆಯನ್ನು ಉಳಿಸಿಕೊಂಡು ಬಂದಿರುವ ಗ್ರಾಮೀಣ ಕಲಾವಿದರ ಬದುಕು ಮತ್ತು ಸಾಧನೆಯನ್ನು ಸಮಾಜ ಗುರುತಿಸಿ ಗೌರವಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ವಿವಿಧ ಜನಪದ ಕಲಾ ತಂಡಗಳಿಂದ ಜನಪದ ಗೀತೆ, ಲಾವಣಿ, ಡೊಳ್ಳು ಕುಣಿತ, ಕೋಲಾಟ ಹಾಗೂ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು. ಕಲಾವಿದರ ಕಲಾ ಪ್ರದರ್ಶನ ಪ್ರೇಕ್ಷಕರ ಮೆಚ್ಚುಗೆಗೆ ಪಾತ್ರವಾಯಿತು.

ಮಾಜಿ ಸೈನಿಕ ನಾಗಯ್ಯ ಮಠ, ಪ್ರಮುಖರಾದ ಆನಂದ ಗಸ್ತಿಗಾರ, ಬಸನಗೌಡ ಬಿರಾದಾರ, ರಾಮಣ್ಣ ಹುಲಗಣ್ಣಿ, ಮಲ್ಲಿಕಾರ್ಜುನ ನಾಟೆಕಾರ, ಎಸ್.ಎಚ್. ಮುದ್ನಾಳ, ಈರಪ್ಪ ಬಿರಾದಾರ, ಗುರುಪಾದಪ್ಪ ಹೆಬ್ಬಾಳ ಮತ್ತೀತರರು ವೇದಿಕೆಯ ಮೇಲಿದ್ದರು.

ಪರಿಷತ್ತಿನ ಜಂಟಿ ಕಾರ್ಯದರ್ಶಿ ಎಸ್.ಕೆ.ಘಾಟಿ ನಿರ್ವಹಿಸಿದರು. ಕಲಾವಿದ ಎಂ.ಪಿ.ವಾಳದವರ ವಂದಿಸಿದರು.

# ಜೆಡಿಎಸ್ ಪಕ್ಷ ಸಂಘಟನೆಗೆ ಒತ್ತು ನೀಡಿ : ತೊರವಿ

■ ಉದಯರಶ್ಮಿ ದಿನಪತ್ರಿಕೆ




ತಾಳಿಕೋಟೆ: ಮುಂಬರುವ ಜಿಲ್ಲಾ ಪಂಚಾಯತ್ ಹಾಗೂ ತಾಲೂಕು ಪಂಚಾಯತ್ ಚುನಾವಣೆಗಳನ್ನು ಗಮನದಲ್ಲಿಟ್ಟುಕೊಂಡು ಜೆಡಿಎಸ್ ಪಕ್ಷವನ್ನು ತಳಮಟ್ಟದಿಂದ ಬಲಪಡಿಸುವ ನಿಟ್ಟಿನಲ್ಲಿ ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಪಕ್ಷ ಸಂಘಟನೆಗೆ ಹೆಚ್ಚಿನ ಒತ್ತು ನೀಡಬೇಕು ಎಂದು ವಿಜಯಪುರ ಜಿಲ್ಲಾ ಜೆಡಿಎಸ್ ಪಕ್ಷದ ವೀಕ್ಷಕರಾದ ಮಲ್ಲಣ್ಣ ತೊರವಿ ಕಾರ್ಯಕರ್ತರಿಗೆ ಕರೆ ನೀಡಿದರು.

ಪಟ್ಟಣದಲ್ಲಿ ನಡೆದ ಜೆಡಿಎಸ್ ಕಾರ್ಯಕರ್ತರ ಸಭೆಯ ನೇತೃತ್ವ ವಹಿಸಿ ಮಾತನಾಡಿದ ಅವರು, ಮುದ್ದೇಬಿಹಾಳ ವಿಧಾನಸಭಾ ಕ್ಷೇತ್ರ ಹಾಗೂ ತಾಳಿಕೋಟೆ ನಗರ ಘಟಕದ ಪಕ್ಷ ಸಂಘಟನೆ, ಮುಂದಿನ ದಿನಗಳಲ್ಲಿ ಕೈಗೊಳ್ಳಬೇಕಾದ ಕಾರ್ಯಚಟುವಟಿಕೆಗಳು ಮತ್ತು ಸಂಘಟನೆಯನ್ನು ಮತ್ತಷ್ಟು ಬಲಪಡಿಸುವ ಕುರಿತು ಕಾರ್ಯಕರ್ತರೊಂದಿಗೆ ಚರ್ಚಿಸಿದರು.

ಜಿಲ್ಲಾ ಪಂಚಾಯತ್ ಹಾಗೂ ತಾಲೂಕು ಪಂಚಾಯತ್ ಚುನಾವಣೆಗಳು ಸಮೀಪಿಸುತ್ತಿರುವ ಹಿನ್ನೆಲೆಯಲ್ಲಿ ಪಕ್ಷದ ಕಾರ್ಯಕರ್ತರು ಗ್ರಾಮೀಣ ಭಾಗದಲ್ಲಿ ಸಕ್ರಿಯವಾಗಿ ಕಾರ್ಯನಿರ್ವಹಿಸಬೇಕು.

ಪ್ರತಿಯೊಂದು ಗ್ರಾಮದಲ್ಲಿಯೂ ಪಕ್ಷದ ಸಂಘಟನೆಯನ್ನು ಬಲಪಡಿಸಿ, ಕಾರ್ಯಕರ್ತರನ್ನು ಒಗ್ಗೂಡಿಸುವ ಮೂಲಕ ಪಕ್ಷದ ನೆಲೆಯನ್ನು ಮತ್ತಷ್ಟು ವಿಸ್ತರಿಸಬೇಕು ಎಂದು ಅವರು ಸಲಹೆ ನೀಡಿದರು.

ಕಾರ್ಯಕರ್ತರ ಅಭಿಪ್ರಾಯಗಳಿಗೆ ಸ್ಪಂದಿಸಿದ ಮಲ್ಲಣ್ಣ ತೊರವಿ ಅವರು, ಪಕ್ಷದ ಜಿಲ್ಲಾಧ್ಯಕ್ಷರೊಂದಿಗೆ ಚರ್ಚಿಸಿ, ಕಾರ್ಯಕರ್ತರ ಒಮ್ಮತದ ಅಭಿಪ್ರಾಯ ಹಾಗೂ ಪಕ್ಷದ ಹಿತದೃಷ್ಟಿಯನ್ನು ಗಮನದಲ್ಲಿಟ್ಟುಕೊಂಡು ಮುಂದಿನ ಸಂಘಟನಾ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಈ ಸಭೆಯಲ್ಲಿ ತಾಳಿಕೋಟೆ ಜೆಡಿಎಸ್ ನಗರ ಘಟಕದ ಅಧ್ಯಕ್ಷ ಪ್ರಲ್ಹಾದಸಿಂಗ್ ಹಜೇರಿ, ತಾಲೂಕು ಅಧ್ಯಕ್ಷ ಮಡುಸಾಹುಕಾರ ಬಿರಾದಾರ, ಶ್ರೀಮತಿ ಮಹಾದೇವಿ ಪಾಟೀಲ, ಉಪಾಧ್ಯಕ್ಷ ಶರಣಗೌಡ ಪಾಟೀಲ, ಮಲ್ಲನಗೌಡ ಪಾಟೀಲ, ಸೇರಿದಂತೆ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಇ.ಡಿ ದಾಳಿಯಿಂದ ಜಾರಕಿಹೊಳಿ ರನ್ನು ಕುಗ್ಗಿಸಲು ಸಾಧ್ಯವಿಲ್ಲ



■ ಉದಯರಶ್ಮಿ ದಿನಪತ್ರಿಕೆ

**ಅಥಣಿಯಲ್ಲಿ ನಡೆದ ಬೃಹತ್ ಪ್ರತಿಭಟನಾ ಸಭೆಯಲ್ಲಿ ಕಾಂಗ್ರೆಸ್ ಮುಖಂಡ ಗಜಾನನ ಮಂಗಸೂಳಿ ಗುಡುಗು**

ಅಥಣಿ: ಸತೀಶ ಜಾರಕಿಹೊಳಿ ಅವರನ್ನು ಇಂತಹ ಇಡಿ ದಾಳಿಗಳ ಮೂಲಕ ರಾಜಕೀಯವಾಗಿ ಕುಗ್ಗಿಸಲು ಸಾಧ್ಯವಿಲ್ಲ ಕಾಂಗ್ರೆಸ್ ಕಾರ್ಯಕರ್ತರು ಯಾವುದೇ ಬೆದರಿಕೆಗೆ ಜಗ್ಗುವುದಿಲ್ಲ ಬಗ್ಗುವುದಿಲ್ಲ ಎಂದು ಕಾಂಗ್ರೆಸ್ ಮುಖಂಡ ಗಜಾನನ ಮಂಗಸೂಳಿ ಅವರು ಕೇಂದ್ರ ಸರ್ಕಾರದ ವಿರುದ್ಧ ಗುಡುಗಿದರು.

ರಾಜ್ಯದ ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಅವರ ಮನೆಗಳು ಮತ್ತು ಕಚೇರಿಗಳ ಮೇಲೆ ಇಡಿ ನಡೆಸಿದ ದಾಳಿಯನ್ನು ಖಂಡಿಸಿ ಅಥ-ಣಿ ನಗರದ ಅಂಬೇಡ್ಕರ್ ವೃತ್ತದಲ್ಲಿ ನಡೆದ ಬೃಹತ್ ಪ್ರತಿಭಟನೆಯನ್ನುದ್ದೇಶಿಸಿ ಅವರು ಮಾತನಾಡಿದರು.

ಲೋಕಸಭಾ ಚುನಾವಣೆ ಹತ್ತಿರ ಬರುತ್ತಿದ್ದಂತೆ ಬಿಜೆಪಿ ಸರ್ಕಾರಕ್ಕೆ ಕಾಂಗ್ರೆಸ್ ನಾಯಕರನ್ನು ಕಂಡರೆ ಭಯ ಶುರುವಾಗಿದೆ ಸತೀಶ ಜಾರಕಿಹೊಳಿ ಅವರು ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಶಕ್ತಿ ತುಂಬುವ ಕೆಲಸ ಮಾಡುತ್ತಿದ್ದಾರೆ ಅವರನ್ನು ರಾಜಕೀಯವಾಗಿ ಎದುರಿಸಲು ಸಾಧ್ಯವಾಗದಿದ್ದಾಗ ಇಡಿ, ಐಟಿ, ಸಿಬಿಐ ಮೂಲಕ ಹೆದರಿಸುವ ತಂತ್ರ ನಡೆಸಲಾಗುತ್ತಿದೆ ಇಡಿ ನಿಷ್ಪಕ್ಷಪಾತ ಸಂಸ್ಥೆಯಾಗಿದ್ದರೆ ನಿಜವಾಗಿಯೂ ಧೈರ್ಯವಿದ್ದರೆ ಬಿಜೆಪಿಯ ಭ್ರಷ್ಟ ನಾಯಕರ ಮನೆಗಳ ಮೇಲೂ ದಾಳಿ ನಡೆಸಿ ತೋರಿಸಲಿ ತನಿಖೆ ಎಲ್ಲರಿಗೂ ಒಂದೇ ರೀತಿ ಇರಬೇಕು ಎಂದು ಆಗ್ರಹಿಸಿದರು.

ಈ ವೇಳೆ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸಿದ್ದಾರ್ಥ ಸಿಂಗೆ ಮಾತನಾಡಿ, ಕೇಂದ್ರ ಸರ್ಕಾರ ತನಿಖಾ ಸಂಸ್ಥೆಗಳನ್ನು ಕೈಗೊಂಬೆಯಂತೆ ಬಳಸಿಕೊಳ್ಳುತ್ತಿದೆ ವಿರೋಧ ಪಕ್ಷದ ನಾಯಕರನ್ನು ಗುರಿಯಾಗಿಸಿ ದಾಳಿ ನಡೆಸುವುದು ಪ್ರಜಾಪ್ರಭುತ್ವದ ಕಗ್ಗೊಲೆಯಾಗಿದೆ ತನಿಖೆ ಕಾನೂನುಬದ್ಧವಾಗಿ ಮತ್ತು ಪಾರದರ್ಶಕವಾಗಿ ನಡೆಯಬೇಕು ಎಂದು ಒತ್ತಾಯಿಸಿದರು.

ನಗರದ ಅಂಬೇಡ್ಕರ್ ವೃತ್ತದಲ್ಲಿ ಜಮಾಯಿಸಿದ ನೂರಾರು ಕಾಂಗ್ರೆಸ್ ಕಾರ್ಯಕರ್ತರು ಕೇಂದ್ರ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಬಸವರಾಜ ಬುಟಾಳಿ, ರಮೇಶ ಸಿಂದಗಿ, ಸದಾಶಿವ ಬುಟಾಳಿ, ರಾಜು ಜಮಖಂಡಿಕರ,ಅಸ್ಲಮ್ ನಾಲಬಂದ, ಚಿದಾನಂದ ಮುಖನಿ, ಸಂಜೀವ ಕಾಂಬಳೆ, ಶಿವಾನಂದ ಸೌದಗರ, ವಿಜಯಕುಮಾರ ಬಡಚಿ, ಪೀರಪ್ಪ ಕಾಂಬಳೆ,ಕುಮಾರ ಐದನ್ನವರ, ರೇಖಾ ಪಾಟೀಲ, ನಿಖಿತಾ ಗದಾಡೆ, ಆಶಾ ಪಾಟೀಲ, ಮಹಾದೇವಿ ಹೂಳಿಕಟ್ಟಿ, ಶೋಭಾ ಮಾಳಿ, ಸೇರಿದಂತೆ ನೂರಾರು ಕಾರ್ಯಕರ್ತರು ಭಾಗವಹಿಸಿದ್ದರು

# ಗಣೇಶೋತ್ಸವ ಆಚರಿಸಿ, ಕಾನೂನು ಮೀರಬೇಡಿ

■ ಉದಯರಶ್ಮಿ ದಿನಪತ್ರಿಕೆ



ಚಡಚಣ: ಗಣೇಶೋತ್ಸವವನ್ನು ಶಾಂತಿ, ಸೌಹಾರ್ದತೆ ಹಾಗೂ ಸಂಭ್ರಮದಿಂದ ಆಚರಿಸುವಂತೆ ಗಣೇಶೋತ್ಸವ ಸಮಿತಿಗಳ ಮುಖಂಡರಿಗೆ ಚಡಚಣ ಪೊಲೀಸ್ ಠಾಣೆಯ ಪಿಎಸ್‌ಐ ಅರವಿಂದ ಅಂಗಡಿ ಸೂಚಿಸಿದರು.

ಸೆ.14ರಿಂದ ನಡೆಯಲಿರುವ ಗಣೇಶ ಚತುರ್ಥಿ ಹಿನ್ನೆಲೆಯಲ್ಲಿ ಚಡಚಣ ಪೊಲೀಸ್ ಠಾಣೆ ಆವರಣದಲ್ಲಿ ಮಂಗಳವಾರ ಶಾಂತಿ ಸಭೆ ನಡೆಯಿತು. ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಪಿಎಸ್‌ಐ ಅರವಿಂದ ಅಂಗಡಿ, ಚಡಚಣ ಪೊಲೀಸ್ ಠಾಣಾ ವ್ಯಾಪ್ತಿಯ ಚಡಚಣ ಪಟ್ಟಣ ಸೇರಿದಂತೆ ಎಲ್ಲ ಗ್ರಾಮಗಳಲ್ಲಿ ಗಣೇಶೋತ್ಸವವನ್ನು ಆಚರಿಸಲಾಗುತ್ತಿದ್ದು, ಎಲ್ಲರೂ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡಲು ಸಹಕ-ರಿಸಬೇಕು ಎಂದರು.

ಗಣೇಶ ಮೂರ್ತಿಗಳ ವಿಸರ್ಜನೆಯನ್ನು ರಾತ್ರಿ 10 ಗಂಟೆಯೊಳಗೆ ಪೂರ್ಣಗೊಳಿಸಬೇಕು. ಮಿತಿಮೀರಿದ ಧ್ವನಿಯಿಂದ ವಯೋವೃದ್ಧರು, ಮಕ್ಕಳು ಹಾಗೂ ಅಸ್ವಸ್ಥರು ತೊಂದರೆ ಅನುಭವಿಸುವಂತಾಗಬಾರದು. ಹಬ್ಬದ ಸಂಭ್ರಮದ ಹೆಸರಿನಲ್ಲಿ ಸಾರ್ವಜನಿಕರಿಗೆ ಕಿರಿಕಿರಿ ಉಂಟುಮಾಡುವ ರೀತಿಯಲ್ಲಿ ಧ್ವನಿವರ್ಧಕ ಬಳಸುವುದನ್ನು ನಿಯಂತ್ರಿಸಿ ಡಿಜೆಗಳಲ್ಲಿ ಇಂಪಾದ ಹಾಡುಗಳಿರಲಿ ಮತ್ತು ಡಿಜೆಗಳಲ್ಲಿ ಯಾವುದೇ ಕೋಮು ಪ್ರಚೋದಕ ಅಥವಾ ಅಶಾಂತಿಗೆ ಕಾರಣವಾಗುವ ಹಾಡುಗಳನ್ನು ಪ್ರಸಾರ ಮಾಡಬಾರದು. ನಿಯಮ ಉಲ್ಲಂಘಿ-ಸಿದಲ್ಲಿ ಡಿಜೆ ಹಾಗೂ ಸೌಂಡ್ ಸಿಸ್ಟಮ್‌ಗಳನ್ನು ಜಪ್ತಿ ಮಾಡಿ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

5, 7, 9 ಹಾಗೂ 11ನೇ ದಿನ ಗಣೇಶ ಮೂರ್ತಿಗಳನ್ನು ವಿಸರ್ಜಿಸುವ ಸಮಿತಿಗಳು ಪೂರ್ವಾನುಮತಿ ಪಡೆಯುವುದು ಕಡ್ಡಾಯವಾಗಿದೆ. ವಿಸರ್ಜನೆ ದಿನದಂದು ಆಯೋಜ-ಕರು ಮುನ್ನೆಚ್ಚರಿಕೆ ವಹಿಸಿ, ಪೊಲೀಸ್ ಇಲಾಖೆ ಸೂಚಿಸಿರುವ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ಹೇಳಿದರು.

ಬಿಜೆಪಿ ಚಡಚಣ ಮಂಡಲ ಅಧ್ಯಕ್ಷ ಕಾಂತುಗೌಡ (ಚಂದ್ರಕಾಂತ) ಪಾಟೀಲ ಮಾತನಾಡಿ, ಈ ವರ್ಷವೂ ಯಾವುದೇ ಅನಾಹುತಕ್ಕೆ ಅವಕಾಶ ನೀಡದೆ ಶಾಂತಿಯುತವಾಗಿ ಹಬ್ಬ ಆಚರಿಸೋಣ ಎಂದು ಹೇಳಿದರು.

ಪಟ್ಟಣ ಪಂಚಾಯಿತಿ ಅಧ್ಯಕ್ಷ ಮಲ್ಲಿಕಾರ್ಜುನ ಧೋತ್ರೆ ಮಾತನಾಡಿ, ಜಿಲ್ಲಾ ಪಂಚಾಯಿತಿ ಹಾಗೂ ಜಿಲ್ಲಾಧಿಕಾ-ರಿಗಳ ಸುತ್ತೋಲೆ ಮತ್ತು ಆದೇಶದಂತೆ ಪಟ್ಟಣ ಪಂಚಾಯಿತಿ ವತಿಯಿಂದ ವಾರ್ಡ್ ನಂ.7ರಲ್ಲಿ 20ಥ20ಥ20 ಅಡಿ ವಿಸ್ತೀರ್ಣದ ಗಣೇಶ ವಿಸರ್ಜನಾ ಹೊಂಡ ನಿರ್ಮಿಸಲಾಗಿದೆ. ಪಟ್ಟಣದ ಸಾರ್ವಜನಿಕರು ಗಣೇಶ ಮೂರ್ತಿಗಳನ್ನು ಇದೇ ಹೊಂಡದಲ್ಲಿ ವಿಸರ್ಜಿಸಬೇಕು ಎಂದು ಮನವಿ ಮಾಡಿದರು.

ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಬಿ.ಕೆ. ತಾವಸೆ ಮಾತನಾಡಿ, ಸಾರ್ವಜನಿಕ ಸ್ಥಳಗಳಲ್ಲಿ ಗಣೇಶ ಮೂರ್ತಿ ಪ್ರತಿಷ್ಠಾಪಿಸುವವರು ಪಟ್ಟಣ ಪಂಚಾಯಿತಿ, ಕೆಪಿಟಿಸಿಎಲ್ ಹಾಗೂ ಪೊಲೀಸ್ ಇಲಾಖೆಯಿಂದ ಅಗತ್ಯ ಅನುಮತಿ ಪಡೆಯುವುದು ಕಡ್ಡಾಯವಾಗಿದೆ. ಗಣೇಶೋತ್ಸವ ಸಮಿತಿಗಳಿಗೆ ಇಲಾಖೆಯಿಂದ ಅಗತ್ಯ ಸಹಕಾರ ನೀಡಲಾಗುವುದು. ಪ್ರತಿಷ್ಠಾಪನೆ ಹಾಗೂ ಕಾರ್ಯಕ್ರಮಗಳ ಸಂದರ್ಭದಲ್ಲಿ ಶಾಂತಿ ಕಾಪಾಡಲು ಸಮಿತಿಗಳ ಸಹಕಾರ ಅಗತ್ಯ ಎಂದರು.

ಯುವಕರು ಪರಿಸರ ಸ್ನೇಹಿ ಗಣೇಶೋತ್ಸವಕ್ಕೆ ಆದ್ಯತೆ ನೀಡಿ, ಜೇಡಿಮಣ್ಣಿನಿಂದ ತಯಾರಿಸಿದ ಗಣೇಶ ಮೂರ್ತಿಗಳನ್ನು ಪ್ರತಿಷ್ಠಾಪಿಸುವಂತೆ ಮನವಿ ಮಾಡಿದ ಅವರು, ಗಣೇಶ ಮೂರ್ತಿ ವಿಸರ್ಜನೆಗಾಗಿ ಪಟ್ಟಣ ಪಂಚಾಯಿತಿ ವತಿಯಿಂದ ವಾಹನದ ವ್ಯವಸ್ಥೆ ಕೂಡ ಮಾಡಲಾಗಿದೆ ಎಂದು ತಿಳಿಸಿದರು. ಗಣೇಶೋತ್ಸವ ಸಮಿತಿಗಳ ಮುಖಂಡರು ಪ್ರತಿವರ್ಷದಂತೆ ಈ ವರ್ಷವೂ ಶಾಂತಿ, ಸೌಹಾರ್ದತೆ ಹಾಗೂ ಸಂಭ್ರಮದಿಂದ ಗಣೇಶ ಹಬ್ಬ ಆಚರಿಸುವುದಾಗಿ ಭರವಸೆ ನೀಡಿದರು.

ಸಭೆಯಲ್ಲಿ ಚಡಚಣ ಪೊಲೀಸ್‌ಠಾಣಾಧಿಕಾರಿ ಅರವಿಂದ ಅಂಗಡಿ,ಪಟ್ಟಣ ಪಂಚಾಯಿತಿ ಅಧ್ಯಕ್ಷ ಮಲ್ಲಿಕಾರ್ಜುನ ಧೋತ್ರೆ, ಮುಖ್ಯಾಧಿಕಾರಿ ಬಿ.ಕೆ. ತಾವಸೆ, ಬಿಜೆಪಿ ಚಡಚಣ ಮಂಡಲ ಅಧ್ಯಕ್ಷ ಕಾಂತುಗೌಡ (ಚಂದ್ರಕಾಂತ) ಪಾಟೀಲ, ದೇವೆಂದ್ರಪ್ಪಗೌಡ ಪಾಟೀಲ, ಚಿದಾನಂದ ಕುಂಬಾರ ಸೇರಿದಂತೆ ಚಡಚಣ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಗಣೇಶ ಮಿತ್ರ ಮಂಡಳಿಗಳ ಅಧ್ಯಕ್ಷರು ಮತ್ತು ಪದಾಧಿಕಾರಿಗಳು ಉಪಸ್ಥಿತ-ರಿದ್ದರು.

# ಪ್ರಜಾ ಸೇವೆ ಯೋಜನೆಗೆ ಸೆ.12 ರಂದು ಚಾಲನೆ

■ ಉದಯರಶ್ಮಿ ದಿನಪತ್ರಿಕೆ




ಅಥಣಿ: ಸರ್ಕಾರದ ಯಾವುದೇ ಯೋಜನೆಯಾಗಲಿ ನೇರವಾಗಿ ಪ್ರಜೆಗಳಿಗೆ ತಲುಪಿಸುವ ಉದ್ದೇಶದಿಂದ ರಾಜ್ಯ ಸರ್ಕಾರವು "ಪ್ರಜಾ ಸೇವೆ" ಎಂಬ ನೂತನ ಯೋಜನೆಯನ್ನು ಜಾರಿಗೆ ತಂದಿದ್ದು, ಇದರ ಅಡಿಯಲ್ಲಿ ಪ್ರತಿ ತಿಂಗಳ 2ನೇ ಮತ್ತು 4ನೇ ಶನಿವಾರದಂದು ಪ್ರಜಾ ಸೇವಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುವುದು ಎಂದು ತಾಲೂಕು ದಂಡಾಧಿಕಾರಿ ಸಿದ್ರಾಯಿ ಬೋಸಗಿ ತಿಳಿಸಿದರು.

ತಹಸೀಲ್ದಾರ್ ಕಚೇರಿ ಆವರಣದಲ್ಲಿ ಇಂದು ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, "ಈ ಯೋಜನೆಯ ಮೊದಲ ಕಾರ್ಯಕ್ರಮವು ದಿನಾಂಕ 12 ರಂದು ಖೋತ ಕಲ್ಯಾಣ ಮಂಟಪದಲ್ಲಿ ಜರುಗಲಿದ್ದು, ಸಹಕಾರ ಸಚಿವರು ಹಾಗೂ ಅಥಣಿ ಶಾಸಕರಾದ ಲಕ್ಷ್ಮಣ ಸವದಿ ಅವರ ಅಧ್ಯಕ್ಷತೆಯಲ್ಲಿ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗುವುದು" ಎಂದು ಹೇಳಿದರು.

"ಪ್ರಜೆಗಳ ಸಮಸ್ಯೆಗಳನ್ನು ಸಕಾಲದಲ್ಲಿ ಪರಿಹರಿಸುವುದೇ ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ. ಸಾರ್ವಜನಿಕರು ತಮ್ಮ ಯಾವುದೇ ಸಮಸ್ಯೆ, ಅಹವಾಲು, ಬೇಡಿಕೆಗಳನ್ನು ಮುಕ್ತವಾಗಿ ಸಚಿವರ ಹಾಗೂ ಸಂಬಂಧಪಟ್ಟ ಎಲ್ಲ ಇಲಾಖೆಗಳ ಅಧಿಕಾರಿಗಳ ಮುಂದೆ ಇಡಲು ಅವಕಾಶವಿದೆ. ಸ್ಥಳದಲ್ಲಿಯೇ ಅರ್ಜಿ ಸ್ವೀಕರಿಸಿ ಸಮಸ್ಯೆ ಬಗೆಹರಿಸಲು ಕ್ರಮ ಕೈಗೊಳ್ಳಲಾಗುವುದು" ಎಂದು ಅವರು ತಿಳಿಸಿದರು.

# ವಿಜಯಪುರ ಜಿಲ್ಲೆಯಲ್ಲಿ ಕಲ್ಯಾಣ ಕರ್ನಾಟಕ ಉತ್ಸವ ಆಚರಿಸಲು ಆಗ್ರಹ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಸರಕಾರದಿಂದ ವಿಜಯಪುರ ಜಿಲ್ಲೆಯಲ್ಲಿ ಸೆಪ್ಟೆಂಬರ್ 17 ಹೈದ್ರಾಬಾದ್ ವಿಮೋಚನಾ ದಿನಾಚರಣೆ (ಕಲ್ಯಾಣ ಕರ್ನಾಟಕ ಉತ್ಸವ) ಆಚರಿಸುವಂತೆ ಆಗ್ರಹಿಸಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ.ಬಿ.ಪಾಟೀಲ ಅವರಿಗೆ ವಿಜಯಪುರ ಜಿಲ್ಲಾಧಿಕಾ-ರಿಗಳ ಮೂಲಕ ವಿಜಯಪುರ ಜಿಲ್ಲಾ 371 (ಜೆ) ಹೋರಾಟ ಸಮಿತಿ ವತಿಯಿಂದ ಗುರುವಾರ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ 371 ಜೆ ಹೋರಾಟ ಸಮಿತಿಯ ವಿನೋದ ಖೇಡ ಮಾತನಾಡಿ, ಸೆಪ್ಟೆಂಬರ್ 17 ಭಾರತದ ಇತಿಹಾಸದಲ್ಲಿ ಅತ್ಯಂತ ಪ್ರಮುಖವಾದ ದಿನವಾಗಿದೆ. ನಿಜಾಮರ ಆಡಳಿತದಿಂದ ಮುಕ್ತಿ ಪಡೆದು, ಹೈದರಾಬಾದ್ ಸಂಸ್ಥಾನವು ಭಾರತ ಒಕ್ಕೂಟಕ್ಕೆ ಸೇರಿದ ಐತಿಹಾಸಿಕ ದಿನವನ್ನು ನಾವು 'ಹೈದರಾಬಾದ್ ವಿಮೋಚನಾ ದಿನ' (ಪ್ರಸ್ತುತ ಕಲ್ಯಾಣ ಕರ್ನಾಟಕ ಉತ್ಸವ) ಎಂದು ಆಚ-ರಿಸಿಕೊಂಡು ಬರುತ್ತಿದ್ದೇವೆ. ವಿಜಯಪುರ ಜಿಲ್ಲೆಯು ಭೌಗೋಳಿಕವಾಗಿ ಮತ್ತು ಸಾಂಸ್ಕೃತಿಕವಾಗಿ ಈ ಹೋರಾಟದ ಇತಿಹಾಸದೊಂದಿಗೆ ನಿಕಟ ನಂಟನ್ನು ಹೊಂದಿದೆ. ವಿಜಯಪುರ ಜಿಲ್ಲೆಯ ಸಿಂದಗಿಯಲ್ಲಿ ಜನಿಸಿದ ಸ್ವಾಮಿ ರಾಮಾನಂದ ತೀರ್ಥರು ಹೈದ್ರಾಬಾದ ವಿಮೋಚನೆಯ ಚಳುವಳಿಯ ನೇತೃತ್ವ ವಹಿಸಿ ಹೈದ್ರಾಬಾದ್ ಪ್ರಾಂತದ ವಿಮೋಚನೆಯ ಪಿತಾಮಹಾರೆನ್ನಿಸಿದ್ದಾರೆ ಅವರ ತವರು ಜಿಲ್ಲೆ ವಿಜಯಪುರದಲ್ಲಿ ಸರ್ಕಾರದಿಂದ ಹೈದ್ರಾಬಾದ್ ವಿಮೋಚನಾ ಚಳುವಳಿ ನಾಯಕರಿಗೆ ಗೌರವ ಸಲ್ಲಿಸಬೇಕೆಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಮುಖಂಡರಾದ ಅನೀಲ ಇಕ್ಕಡೆ, ನ್ಯಾಯವಾದಿ ಎನ್. ಸುರೇಶ ಕುಮಾರ ಮಾತನಾಡಿ, ಸ್ವಾಮಿ ರಾಮಾನಂದ ತೀರ್ಥ-ರೊಂದಿಗೆ ಜಿಲ್ಲೆಯ ಸರ್ದಾರ ಡಾ॥ ಬಸವರಾಜ ನಾಗೂರು, ಸಿದ್ದಗೊಂಡಪ್ಪಗೌಡ ಪಾಟೀಲ ಅವರು ಸೇರಿದಂತೆ ಈ ಭಾಗದ ಅನೇಕ ಸ್ವಾತಂತ್ರ್ಯ ಹೋರಾಟಗಾರರು ನಿಜಾಮರ ಹಾಗೂ ರಜಾಕಾರರ ದೌರ್ಜನ್ಯದ ವಿರುದ್ಧ ಧೀರೋದಾತ್ತವಾಗಿ ಹೋರಾಡಿ ಹೈದ್ರಾಬಾದ್ ಪ್ರಾಂತವನ್ನು ವಿಮೋಚನೆಗೊಳಿಸಿದ್ದಾರೆ. ಈ ಮಹಾನ್ ಚೇತನಗಳ ತ್ಯಾಗವನ್ನು ಇಂದಿನ ಯುವ ಪೀಳಿಗೆಗೆ ಪರಿಚಯಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ವಿಜಯಪುರ ಜಿಲ್ಲಾ ಕೇಂದ್ರ ಸೇರಿದಂತೆ ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿಯೂ ಸಹ ಸರಕಾರದ ವತಿಯಿಂದಲೇ ಅಧಿಕೃತವಾಗಿ, ಸಕಲ ಸರಕಾರಿ ಗೌರವಗಳೊಂದಿಗೆ ರಾಷ್ಟ್ರ ಧ್ವಜಾರೋಹಣ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಕಲ್ಯಾಣ ಕರ್ನಾಟಕ ಉತ್ಸವನ್ನು ಆಚ-ರಿಸಬೇಕೆಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ 371 ಜೆ ಹೋರಾಟ ಸಮಿತಿಯ ಲಾಯಪ್ಪ ಇಂಗಳೆ ಮಾತನಾಡಿದರು.

ಈ ಸಂದರ್ಭದಲ್ಲಿ ಹೋರಾಟಗಾರರಾದ ವಸಂತ ಭೈರಾಮಡಿ, ಅಂಬರೀಶ ಭೈರಗೊಂಡ, ಕಲ್ಲಪ್ಪ ಶಿವಶರಣ, ಚಂದ್ರಶೇಖರ ಹೊಸಮನಿ, ಮೇಲಗಿರಿ ಕಟ್ಟಿಮನಿ, ಬಸವಕುಮಾರ ಕಾಂಬಳೆ, ಅಶೋಕ ವಾಲಿಕಾರ, ಎಂ.ಎ.ಜಿದ್ದಿಮನಿ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR